RNI: KARKAN\2019\78042



ಸಂಪಾದಕರು : ಸಿ.ಎನ್.ಸಮಗಂಡಿ.

# ಸತ್ಯ ಮಿಥ್ಯ

ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

Satyamithi Kannada Daily Morning

ಚನ್ನು ಮೆನ್ಸ್‌ವೇರ್
ಕೋಳಿಯವರ ಕ್ರಾಸ್.
ಚನ್ನು ಸ್ಟಿಚ್‌ವರ್ಲ್ಡ್
ಬಿ.ಎಸ್.ಎನ್.ಎಲ್. ಆಫೀಸ್ ಹತ್ತಿರ,
ಜೇಂಟ್ಸ್ ಸ್ಪೇಷಲಿಷ್ಟ ಟೇಲರ್
ಗಜೇಂದ್ರಗಡ-582114.
ಸೆಲ್ : 9986982482, 9686165708

ನೂತನ ರಥಕ್ಕೆ ರಂಭಾಪುರಿ ಜಗದ್ಗುರುಗಳಿಂದ ಚಾಲನೆ 2

ಕರುನಾಡಲ್ಲಿ ಹುಲಿಬೀರನ ಭರ್ಜರಿ ಸದ್ದು 3

ಹಾಸನಾಂಬೆ ದರ್ಶನಕ್ಕೆ ಡಿಜಿಟಲ್ ಸ್ಪರ್ಶ 4

ಸಂಪುಟ(Volume): 1 ಸಂಚಿಕೆ (Issue): 83 ● ಪುಟ (Page): 4 ● ದರ: Rs. 4 ಭಾನುವಾರ 4 ಅಕ್ಟೋಬರ್ 2026 ● 4 OCTOBER 2026 ● ಧಾರವಾಡ ● ಹಾವೇರಿ ● ಗದಗ ● ಕೊಪ್ಪಳ ● ವಿಜಯನಗರ ● ರಾಯಚೂರು ● ವಿಜಯಪುರ ● ಬಾಗಲಕೋಟೆ

# ಹಾಕಿ, ಕ್ರಿಕೆಟ್‌ನಲ್ಲಿ ಭಾರತ ಚಿನ್ನದ ಬೇಟೆ

## ಏಷ್ಯನ್ ಗೇಮ್ಸ್‌ನಲ್ಲಿ ಬಂಗಾರದ ಪದಕ ಗೆದ್ದ ಮೈಸೂರಿನ ಮಹಿಳಾ ಗಾಲ್ಫರ್

**ನಿಶ್ಶಿನ್:** ಜಪಾನ್ ನಲ್ಲಿ ನಡೆಯುತ್ತಿರುವ ಏಷ್ಯನ್ ಗೇಮ್ಸ್ ಕ್ರೀಡಾಕೂಟದ ಕ್ರಿಕೆಟ್ ವಿಭಾಗದಲ್ಲಿ ಭಾರತ ತಂಡ ಮತ್ತೆ ಚಿನ್ನದ ಪದಕ ಬಾಚಿಕೊಂಡಿದೆ.

ಫೈನಲ್‌ನಲ್ಲಿ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು 19 ರನ್'ಗಳ ಅಂತರದಲ್ಲಿ ಮಣಿಸಿದ ಭಾರತ ಮತ್ತೆ ಚಿನ್ನದ ಪದಕ–ಕ್ಕೆ ಮುತ್ತಿಟ್ಟಿತು. ಏಷ್ಯನ್ ಕ್ರೀಡಾಕೂಟದ ಪ್ರಸ್ತುತ ಆವೃತ್ತಿಯಲ್ಲಿ ಭಾರತಕ್ಕೆ ಇದು 19ನೇ ಚಿನ್ನದ ಪದಕವಾಗಿದೆ.

ಜಪಾನ್‌ನನಿಶ್ಶಿನ್‌ನಕೊರೋಗಿಮೈದಾನದಲ್ಲಿ ಇಂದು ನಡೆದ ಫೈನಲ್ ಪಂದ್ಯದಲ್ಲಿ ಭಾರತ ತಂಡ ನೀಡಿದ್ದ 212 ರನ್ ಗಳ ಬೃಹತ್ ಗುರಿಯನ್ನು ಬೆನ್ನು ಹತ್ತಿದ ಪಾಕಿಸ್ತಾನ 20 ಓವರ್ ನಲ್ಲಿ 6 ವಿಕೆಟ್ ನಷ್ಟಕ್ಕೆ 192 ರನ್ ಗಳನ್ನಷ್ಟೇ ಗಳಿಸಲು ಶಕ್ತವಾಯಿತು. ಈ ಮೂಲಕ 19 ರನ್ ಗಳ ಅಂತರದ ವಿರೋಚಿತ ಗೆಲುವು ಸಾಧಿಸಿತು.

ಪಾಕಿಸ್ತಾನ ಪರ ಹಸನ್ ನವಾಜ್ 96 ರನ್ ಗಳಿಸಿ ಕೇವಲ 4 ರನ್ ಅಂತರದಲ್ಲಿ ಶತಕ ವಂಚಿತರಾದರು. ಅಂತೆ–ಯೇ ಪಾಕಿಸ್ತಾನವನ್ನು ಗೆಲುವಿನ ದಡ ಸೇರಿಸುವಲ್ಲಿ ವಿಫಲರಾದರು.

ಭಾರತದ ಪರ ಅಕ್ಸರ್ ಪಟೇಲ್, ವಾಷಿಂಗ್ಟನ್ ಸುಂದರ್ ಮತ್ತು ಶಿವಂ ದುಬೆ ತಲಾ 2 ವಿಕೆಟ್ ಪಡೆದರು.




### ಮಹಿಳಾ ಗಾಲ್ಫರ್ ಪ್ರಣವಿಗೆ ಮೊದಲ ಪದಕ

ದೆಹಲಿ: ಕರ್ನಾಟಕದ ಮೈಸೂರು ಮೂಲದ 23 ವರ್ಷದ ಪ್ರಣವಿ ಅರಸ್ ಇಂದು ಶನಿವಾರ ಇತಿಹಾಸ ನಿರ್ಮಿಸಿದ್ದು, ಏಷ್ಯನ್ ಗೇಮ್ಸ್‌ನಲ್ಲಿ ಚಿನ್ನದ ಪದಕ ಗೆದ್ದ ಮೊದಲ ಭಾರತೀಯ ಮಹಿಳಾ ಗಾಲ್ಫರ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾ–



ರೆ. ಅಂತಿಮ ಸುತ್ತಿನಲ್ಲಿ ಕೇವಲ ಒಂದು ಸ್ಟ್ರೋಕ್ ಮುನ್ನಡೆ ಕಾಯ್ದುಕೊಂಡು ಅವರು ಈ ಸಾಧನೆ ಮಾಡಿದರು. ಅವರ ಪ್ರದರ್ಶನದ ನೆರವಿನಿಂದ ಭಾರತ ತಂಡ ಬೆಳ್ಳಿ ಪದಕವನ್ನೂ ಗೆದ್ದುಕೊಂಡಿತು.

ಮೂರನೇ ಹೋಲ್‌ನಲ್ಲಿ ಮಾಡಿದ ಟ್ರಿಪಲ್ ಬೋಗಿಯಿಂದ ಮೂರು ಸ್ಟ್ರೋಕ್‌ಗಳ ಮುನ್ನಡೆ ಕಳೆದುಕೊಂಡಿದ್ದ ಪ್ರಣವಿ, ಬಳಿಕ ಮೂರು ಬರ್ಡಿಗಳನ್ನು ದಾಖಲಿಸಿ ಅದ್ಭುತವಾಗಿ ಪುಟಿದೆದ್ದರು.

ಅಂತಿಮ ಸುತ್ತಿನಲ್ಲಿ ಈವನ್–ಪಾರ್ 70 ಸ್ಕೋರ್ ದಾಖಲಿಸಿದ ಅವರು, ನಾಲ್ಕು ದಿನಗಳ ಒಟ್ಟು 15–ಅಂಡರ್ 265 ಸ್ಕೋರ್‌ನೊಂದಿಗೆ ಸ್ಪರ್ಧೆ ಮುಗಿಸಿದರು. ಎರಡನೇ ಸ್ಥಾನ ಪಡೆದವರಿಗಿಂತ ಒಂದು ಸ್ಟ್ರೋಕ್ ಮುನ್ನಡೆ ಸಾಧಿಸಿದರು.

ಅವರ ಪ್ರದರ್ಶನವು ಅದಿತಿ ಅಶೋಕ್ (ಅಂತಿಮ ಸುತ್ತಿನಲ್ಲಿ 67) ಮತ್ತು ದೀಕ್ಷಾ ದಾಗರ್ (77) ಅವರೊಂದಿಗೆ ಭಾರತ ತಂಡ ಬೆಳ್ಳಿ ಪದಕ ಗೆಲ್ಲುವಲ್ಲೂ ಪ್ರಮುಖ ಪಾತ್ರ ವಹಿಸಿತು.

ತಂಡದಪದಕನಿರ್ಧಾರಕ್ಕೆಇಬ್ಬರುಆಟಗಾರ್ತಿಯರಅತ್ಯುತ್ತಮಸ್ಕೋರ್‌ಗಳನ್ನು ಪರಿಗಣಿಸಲಾಗುತ್ತದೆ. ಭಾರತ 14–ಅಂಡರ್ 546 ಸ್ಕೋರ್‌ನೊಂದಿಗೆ ಬೆಳ್ಳಿ ಪದಕ ಗೆದ್ದರೆ, 22–ಅಂಡರ್ 538 ಸ್ಕೋರ್ ದಾಖಲಿಸಿದ ಚೀನಾ ಚಿನ್ನದ ಪದಕ ತನ್ನದಾಗಿಸಿಕೊಂಡಿತು.

2002ರ ಏಷ್ಯನ್ ಗೇಮ್ಸ್‌ನಲ್ಲಿ ಪುರುಷರ ವೈಯಕ್ತಿಕ ವಿಭಾಗದಲ್ಲಿ ಶಿವ್ ಕಪೂರ್ ಚಿನ್ನ ಗೆದ್ದ ಬಳಿಕ, ಗಾಲ್ಫ್‌ನಲ್ಲಿ ಭಾರತಕ್ಕೆ ಒಲಿದ ಮೊದಲ ಚಿನ್ನದ ಪದಕ ಇದಾಗಿದೆ.

### ಪುರುಷರ ಹಾಕಿಯಲ್ಲೂ ಚಿನ್ನ ಗೆದ್ದ ಭಾರತ

**ಐಚಿ–ನಗೋಯಾ: ಏಷ್ಯನ್ ಕ್ರೀಡಾಕೂಟದ ಪುರುಷರ ಹಾಕಿ ಫೈನಲ್‌ನಲ್ಲಿ ಭಾರತ ಮಲೇಷ್ಯಾವನ್ನು 5–1 ಅಂತರದಿಂದ ಭರ್ಜರಿಯಾಗಿ ಸೋಲಿಸಿ, ಸತತ ಎರಡನೇ ಬಾರಿಗೆ ಚಿನ್ನದ ಪದಕವನ್ನು ಗೆದ್ದುಕೊಂಡಿತು.**

**ಈ ಕ್ರೀಡಾಕೂಟದ ಇತಿಹಾಸದಲ್ಲಿ ಭಾರತ ಈ ವಿಭಾಗದಲ್ಲಿ ತನ್ನ ಚಿನ್ನದ ಪದಕವನ್ನು ಉಳಿಸಿಕೊಂಡಿರುವುದು ಇದೇ ಮೊದಲು. ಈ ಗೆಲುವಿನೊಂದಿಗೆ, ಭಾರತ ಐಂ 2028 ಒಲಿಂಪಿಕ್ಸ್‌ನಲ್ಲಿ ನೇರ ಅರ್ಹತೆಯನ್ನು ಖಚಿತಪಡಿಸಿಕೊಂಡಿದೆ.**

**ನಾಯಕ ಹರ್ಮನ್‌ಪ್ರೀತ್ ಸಿಂಗ್ 11ನೇ ನಿಮಿಷದಲ್ಲಿ ಪೆನಾಲ್ಟಿ ಕಾರ್ನರ್ ಡ್ರ್ಯಾಗ್ ಫ್ಲಿಕ್ ಮೂಲಕ ಗೋಲು ಗಳಿಸಿ ಖಾತೆ ತೆರೆದರು, ಆದರೆ 14ನೇ ನಿಮಿಷದಲ್ಲಿ ಮಲೇಷ್ಯಾದ ಶೆಲ್ಲೊ ಸಿಲ್ವೆರಿಯಸ್ ಗೋಲು ಗಳಿಸಿ ಮೊದಲ ಕ್ವಾರ್ಟರ್ ಅಂತ್ಯಕ್ಕೆ ಸ್ಕೋರ್ ಅನ್ನು 1–1 ಸಮಬಲಗೊಳಿಸಿದರು.**

**ಎರಡನೇ ಕ್ವಾರ್ಟರ್‌ನಲ್ಲಿ ಜುಗ್ರಾಜ್ ಸಿಂಗ್ ಪೆನಾಲ್ಟಿ ಕಾರ್ನರ್ ನ್ನು ಗೋಲಾಗಿ ಪರಿವರ್ತಿಸುವ ಮೂಲಕ ಭಾರತಕ್ಕೆ ಮತ್ತೆ ಮುನ್ನಡೆ ತಂದುಕೊಟ್ಟರು; ಇದರೊಂದಿಗೆ ಹಾಲಿ ಚಾಂಪಿಯನ್ ಭಾರತ ತಂಡ 2–1 ಮುನ್ನಡೆಯೊಂದಿಗೆ ವಿರಾಮಕ್ಕೆ ತೆರಳಿತು. ನಂತರ ಮೂರನೇ ಕ್ವಾರ್ಟರ್‌ನ 12ನೇ ನಿಮಿಷದಲ್ಲಿ ಹಾರ್ದಿಕ್ ಸಿಂಗ್ ಪೆನಾಲ್ಟಿ ಸ್ಟ್ರೋಕ್ ಅನ್ನು ಗೋಲಾಗಿ ಪರಿವರ್ತಿಸಿ ಭಾರತದ ಮುನ್ನಡೆಯನ್ನು 3–1ಕ್ಕೆ ಹೆಚ್ಚಿಸಿದರು.**

# ಬರ ಅಧ್ಯಯನ ತಂಡ ಆಗಮನ

## ರಾಜ್ಯದ 217 ತಾಲೂಕುಗಳನ್ನು ಬರಪೀಡಿತ ಘೋಷಣೆ

**ಬೆಂಗಳೂರು :** ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಇಂದು ಶನಿವಾರ ರಾಜ್ಯದ ಬರ ಪರಿಸ್ಥಿತಿ ಹಾಗೂ ಬೆಳೆ ನಷ್ಟದ ಕುರಿತು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಜಿತ್ ಕುಮಾರ್ ಸಾಹು ನೇತೃತ್ವದ ಕೇಂದ್ರದ ಅಂತರ ಸಚಿವಾಲಯ ತಂಡದೊಂದಿಗೆ ಚರ್ಚೆ ನಡೆಸಿದರು.

ರಾಜ್ಯದಲ್ಲಿನ ಪರಿಸ್ಥಿತಿಯನ್ನು ಸ್ಥಳದಲ್ಲೇ ಪರಿಶೀಲಿಸಿ, ಮಳೆ ಕೊರತೆಯಿಂದ ಉಂಟಾಗಿರುವ ಹಾನಿಯ ಪ್ರಮಾಣವನ್ನು ಅಂದಾಜಿಸಲು ಕೇಂದ್ರದ ತಂಡ ಕರ್ನಾಟಕಕ್ಕೆ ಆಗಮಿಸಿದೆ. ಹೆಚ್ಚುವರಿ ಪ್ರದೇಶಗಳಲ್ಲೂ ವಾಸ್ತವಾಂಶ ಪರಿಶೀಲನೆ (Ground reality ) ನಡೆಯುತ್ತಿದೆ.

**ಪ್ರಧಾನಿ ಮೋದಿಗೆ ಖರ್ಗೆ ಪತ್ರ:** ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಕರ್ನಾಟಕದ ರೈತರಿಗೆ ತುರ್ತು ಕೇಂದ್ರ ನೆರವು ನೀಡುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ಇತ್ತೀಚಿನ ವರ್ಷಗಳಲ್ಲೇ ಕರ್ನಾಟಕವು ಅತ್ಯಂತ ಗಂಭೀರ ಬರ ಪರಿಸ್ಥಿತಿಗಳಲ್ಲಿ ಈ ವರ್ಷ ಎದುರಿಸುತ್ತಿದ್ದು, ಗಣನೀಯ ಮಳೆ ಕೊರತೆ, ವ್ಯಾಪಕ ಬೆಳೆ ನಷ್ಟ ಹಾಗೂ ಲಕ್ಷಾಂತರ ರೈತ ಕುಟುಂಬಗಳಲ್ಲಿ ಸಂಕಷ್ಟ ಉಂಟಾಗಿದೆ ಎಂದು ಹೇಳಿದ್ದಾರೆ.

ಅಂದಾಜು 18,748.23 ಕೋಟಿ ನಷ್ಟದ ಹಿನ್ನೆಲೆಯಲ್ಲಿ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ನಿಧಿ (NDRF) ಮತ್ತು ರಾಜ್ಯ ವಿಪತ್ತು ಪ್ರತಿಕ್ರಿಯಾ ನಿಧಿ (SDRF) ವ್ಯವಸ್ಥೆಯಡಿ ಕರ್ನಾಟಕವು 3,705.30 ಕೋಟಿ ನೆರವು ಕೋರಿದ್ದಾರೆ.

ರಾಜ್ಯ ಕೋರಿರುವ ಮೊತ್ತವನ್ನು ತಕ್ಷಣವೇ ಬಿಡುಗಡೆ ಮಾಡುವಂತೆ ಅವರು ಕೇಂದ್ರವನ್ನು ಒತ್ತಾಯಿಸಿದ್ದಾರೆ. ಅಲ್ಲದೆ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಬರದಿಂದ ಉಂಟಾಗಿರುವ ಹಾನಿಯನ್ನು ಪರಿಶೀಲಿಸಲು ಕೇಂದ್ರದತಂಡವನ್ನುನಿಯೋಜಿಸುವಂತೆಯೂಮನವಿಮಾಡಿದ್ದಾರೆ. 2015–16ರ ಕೃಷಿ ಗಣತಿ ಆಧಾರವಾಗಿರಿಸುವ ಬದಲು, ಕರ್ನಾಟಕದ ನವೀಕರಿಸಿದ 'ಭೂಮಿ' ಭೂ ದಾಖಲೆಗಳನ್ನು ಬಳಸಿಕೊಂಡು ಸಣ್ಣ



ಮತ್ತು ಅತಿ ಸಣ್ಣ ರೈತರಿಗೆ ನೀಡುವ ಇನ್‌ಪುಟ್ ಸಬ್ಸಿಡಿಯನ್ನು ಲೆಕ್ಕಹಾಕಬೇಕು ಎಂದು ಮಲ್ಲಿಕಾರ್ಜುನ ಖರ್ಗೆ ಆಗ್ರಹಿಸಿದ್ದಾರೆ. ಇದರಿಂದ ಪರಿಹಾರಕ್ಕೆ ಅರ್ಹರಾಗಿರುವ ರೈತರು ನೆರವಿನಿಂದ ಹೊರಗುಳಿಯುವುದನ್ನು ತಪ್ಪಿಸಲು ಸಾಧ್ಯವಾಗಲಿದೆ ಎಂದು ಅವರು ಹೇಳಿದ್ದಾರೆ.

ನಾಲ್ಕು ದಿನಗಳ ಕಾಲ ನಡೆಯಲಿರುವ ಬರ ಪರಿಸ್ಥಿತಿ ಮೌಲ್ಯಮಾಪನವನ್ನು ಮೂರು ತಂಡಗಳ ಮೂಲಕ 12 ಜಿಲ್ಲೆಗಳಲ್ಲಿ ಕೈಗೊಳ್ಳಲಾಗುತ್ತದೆ. ರಾಜ್ಯದ 217 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿರುವ ಹಿನ್ನೆಲೆಯಲ್ಲಿ ಈ ಮೌಲ್ಯಮಾಪನ ನಡೆ–ಯುತ್ತಿದೆ.

ಸಭೆಯಲ್ಲಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ, ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

# ಡಿ. 4ರಿಂದ 13ರವರೆಗೆ ಬೆಂಗಳೂರು ಜಾತ್ರೆ

**ಬೆಂಗಳೂರು:** ರಾಜ್ಯ ಸರ್ಕಾರ ಸ್ವಾತಂತ್ರ್ಯ ದಿನಾಚರಣೆ ವೇಳೆ ಫ್ರೀಡಂ ಹಬ್ಬದ ಮೂಲಕ ಸಿಲಿಕಾನ್ ಸಿಟಿ ಜನರಿಗೆ ಮನರಂಜನೆಯರಸದೌತಣಕ್ಕೆವೇದಿಕೆಮಾಡಿಕೊಟ್ಟಿತ್ತು. ಇದರ ಬೆನ್ನಲ್ಲೇ ಮತ್ತೊಂದು ಹಬ್ಬ, ಅಲ್ಲ ಈ ಭಾರಿ ಅದ್ದೂರಿ ಬೆಂಗಳೂರು ಜಾತ್ರೆಗೆ ರಾಜ್ಯ ಸರ್ಕಾರ ತಯಾರಿ ಮಾಡಿಕೊಂಡಿದೆ.



ಮುಂಬರುವ ಡಿಸೆಂಬರ್‌ನಲ್ಲಿ ಊರ ಹಬ್ಬ, ಬೆಂಗಳೂರು ಜಾತ್ರೆ ಆಯೋಜಿಸುವುದಾಗಿ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಶನಿವಾರ ಘೋಷಿಸಿದ್ದಾರೆ.

ಈ ಸಂಬಂಧ ಇಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದಕೃಷ್ಣ ಬೈರೇಗೌಡ ಅವರು, ಫ್ರೀಡಂ ಹಬ್ಬ ಈಗಾಗಲೇ ಜನರ ಮನಸು ಗೆದ್ದಿತ್ತು. ಬೆಂಗಳೂರು ಜನರಿಗಾಗಿ ಊರ ಹಬ್ಬ ಮಾಡಬೇಕು ಎಂದು ಮುಖ್ಯಮಂತ್ರಿಗಳು ಕೂಡ ಹೇಳಿದ್ದರು. ಬೆಂಗಳೂರು ಉತ್ಸವದ ಘೋಷಣೆ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಡಿಸೆಂಬರ್ 4ರಿಂದ ಡಿಸೆಂಬರ್ 13ರವರೆಗೆ 'ಬೆಂಗಳೂರು ಜಾತ್ರೆ ಆಯೋಜನೆ ಮಾಡುತ್ತಿದ್ದೇವೆ ಎಂದರು.

ನಗರದ ಮೂಲಸೌಕರ್ಯಗಳನ್ನು ಸುಧಾರಿಸುವುದರ ಜೊತೆಗೆ, ಕರ್ನಾಟಕದ ಶ್ರೀಮಂತ ಕಲೆ ಮತ್ತು ಸಾಂಸ್ಕೃತಿಕ ಸಂಪ್ರದಾಯಗಳನ್ನು ಸಂರಕ್ಷಿಸಿ ಉತ್ತೇಜಿಸುವುದು ಹಾಗೂ ಯಾಂತ್ರಿಕ ಮತ್ತು ವೇಗದ ಜೀವನಶೈಲಿಯ ನಗರದಲ್ಲಿ ವಾಸಿಸುವ ಜನರ ಜೀವನವನ್ನು ಶ್ರೀಮಂತಗೊಳಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದರು.

"ಇದೇ ಆಶಯದೊಂದಿಗೆ, ರಾಜ್ಯ ಸರ್ಕಾರವು 'ಬೆಂಗಳೂರು ಜಾತ್ರೆ'ಯನ್ನು ಆಯೋಜಿಸಲು ನಿರ್ಧರಿಸಿದೆ," ಎಂದು ಸಚಿವರು ತಿಳಿಸಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಹೇಳಿಕೆಯ ಪ್ರಕಾರ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ಮತ್ತು ಸಚಿವ ಕೃಷ್ಣ ಬೈ–ರೇಗೌಡ ಮಾರ್ಗದರ್ಶನದಲ್ಲಿ ನಡೆಯಲಿರುವ ಈ ಜಾತ್ರೆಯು, ಇಡೀ ಸಮುದಾಯವೇ ಒಗ್ಗೂಡಿ ಆಚರಿಸುವ ಕರ್ನಾಟಕದ ಸಾಂಪ್ರದಾಯಿಕ 'ಊರು ಹಬ್ಬ/ಜಾತ್ರೆ'ಯಿಂದ ಸ್ಫೂರ್ತಿ ಪಡೆದಿದೆ.

ನಗರದ ವಿವಿಧ ಬಡಾವಣೆಗಳು, ಸಮುದಾಯಗಳು, ಸಾಂಸ್ಕೃತಿಕ ಸಂಸ್ಥೆಗಳು, ಶಾಲೆ–ಕಾಲೇಜುಗಳು, ವಾಣಿಜ್ಯಸಂಸ್ಥೆಗಳು, ಕಲಾವಿದರುಮತ್ತು ಸರ್ಕಾರಿ ಏಜೆನ್ಸಿಗಳು ನಗರದಾದ್ಯಂತ ತಮ್ಮದೇ ಆದ ಕಾರ್ಯಕ್ರಮಗಳನ್ನು ಆಯೋಜಿಸಲು ಒಂದು ಸಾಮಾನ್ಯ ವೇದಿಕೆಯನ್ನು ಕಲ್ಪಿಸುವ ಮೂಲಕ ಆ 'ಜಾತ್ರೆಯ ಭಾವನೆ'ಯನ್ನು ಬೆಂಗಳೂರಿಗೆ ತರುವುದು ಇದರ ಉದ್ದೇಶವಾಗಿದೆ.

ಇದಕ್ಕಾಗಿ ಯಾವುದೇ ಒಂದು ನಿರ್ದಿಷ್ಟ 'ಜಾತ್ರಾ ಮೈದಾನ' ಅಥವಾ ಕೇಂದ್ರೀಯ ವೇದಿಕೆ ಇರುವುದಿಲ್ಲ. ಒಂದೇ ಸ್ಥಳಕ್ಕೆ ಸೀಮಿತವಾಗದೆ ನಗರದ ಹಲವೆಡೆ ಕಾರ್ಯಕ್ರಮಗಳು ನಡೆಯಲಿವೆ ಎಂದು ಸಚಿವರು ತಿಳಿಸಿದ್ದಾರೆ.

ಬೀದಿಗಳು, ಉದ್ಯಾನವನಗಳು, ಸಾರ್ವಜನಿಕ ಸ್ಥಳಗಳು, ಶಿಕ್ಷಣ ಸಂಸ್ಥೆಗಳು, ವಸ್ತುಸಂಗ್ರಹಾಲಯಗಳು, ಸಾಂಸ್ಕೃತಿಕ ಕೇಂದ್ರಗಳು ಮತ್ತು ಇತರ ಸ್ಥಳಗಳಲ್ಲಿ ಕಾರ್ಯಕ್ರಮಗಳು ನಡೆಯಲಿವೆ ಎಂದರು.

ಇನ್ನು 10 ದಿನಗಳ ಕಾಲ ನಡೆಯುವ ಈ ಬೆಂಗಳೂರು ಜಾತ್ರೆಯಲ್ಲಿ ವಿವಿಧ ಕಾರ್ಯಕ್ರಮಗಳು ಇರಲಿವೆ. ಬೆಂಗಳೂರು ಮೆಟ್ರೋ, ಪೊಲೀಸ್ ಇಲಾಖೆ, ಬೆಸ್ಕಾಂ ಸೇರಿದಂತೆ ಎಲ್ಲಾ ಅಂಗ ಸಂಸ್ಥೆಗಳು ಸೇರಿ ಈ ಬೆಂಗಳೂರು ಜಾತ್ರೆ ಮಾಡುತ್ತೇವೆ. ಎಲ್ಲಾ ಸಂಸ್ಥೆಗಳಿಗೂ ಪತ್ರ ಬರೆದಿದ್ದೇವೆ. ಐಟಿ ಹಬ್‌ಗಳಿದ್ದಾವೆ, ಖಾಸಗಿ ಶಿಕ್ಷಣ ಸಂಸ್ಥೆಗಳು, ಕೇಂದ್ರದಡಿ ಬರುವ ಇಲಾಖೆಗಳಿದ್ದಾವೆ, ಇಂಡಿಯನ್ ಇನ್ಸಿಟ್ಯೂಟ್ ಆಫ್ ಸೈನ್ಸ್ ಹೀಗಾಗಿ ಅವರಿಗೂ ಕಾರ್ಯಕ್ರಮ ಮಾಡುವಂತೆ ಆಹ್ವಾನ ನೀಡಲಿದ್ದೇವೆ. ಹೋಟೆಲ್, ರೆಸ್ಟೋರೆಂಟ್‌ಗಳಿಗೂ ಆಹ್ವಾನ ನೀಡಿದ್ದು, ಆಯೋಜಕರಾಗಿ ಭಾಗಿಯಾಗುವಂತೆ ಮನವಿ ಮಾಡಿದ್ದೇವೆ ಎಂದು ಮಾಹಿತಿ ನೀಡಿದರು.

**ಜಾತ್ರೆಯಲ್ಲಿ ಯಾವೆಲ್ಲಾ ಕಾರ್ಯಕ್ರಮಗಳು?:** ಬೆಂಗಳೂರಿನ ಐದು ಮಹಾನಗರ ಪಾಲಿಕೆಗಳಲ್ಲೂ ಕಾರ್ಯಕ್ರಮಗಳು ನಡೆಯಲಿವೆ. ಸರ್ಕಾರಿ ಕಚೇರಿ, ಶಿಕ್ಷಣ ಸಂಸ್ಥೆ, ಉದ್ಯಾನ, ರಸ್ತೆಗಳಲ್ಲಿ ಕಾರ್ಯಕ್ರಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮೂಲಕ ಜಾನಪದ ಕಲೆಗಳ ಪ್ರದರ್ಶನ, ನಮ್ಮ ರಸ್ತೆ, ನಮ್ಮ ಬಡಾವಣೆ, ನಮ್ಮ ಸಂಸ್ಥೆ, ನಮ್ಮ ಕಲೆ ಹೀಗೆ ಎಲ್ಲರ ಜಾತ್ರೆ. ಜಿಬಿಎ, ಬಿಡಿಎ, ಕನ್ನಡ–ಸಂಸ್ಕೃತಿ ಇಲಾಖೆ ಸೇರಿ ಹಣ ಹಾಕಿ ಮಾಡಲಾಗುತ್ತೆ. ಕನ್ನಡ–ಸಾಂಸ್ಕೃತಿಕ ಇಲಾಖೆಯಿಂದಲೇ 5 ಕೋಟಿ ಹಣ ಮೀಸಲಿದೆ. ಈ ರೀತಿ ಕಾರ್ಯಕ್ರಮದಿಂದ ಬೆಂಗಳೂರಿಗೆ ಹೆಚ್ಚು ಪ್ರವಾಸಿಗರು ಬರುತ್ತಾರೆ. ಇದು ಬೆಂಗಳೂರಿನ ಆರ್ಥಿಕ ಪ್ರಗತಿಗೂ ಸಹಕಾರವಾಗುತ್ತೆ. ಖಾಸಗಿ ಸಂಸ್ಥೆ ಬೆಂಗಳೂರು ಹಬ್ಬ ಆಯೋಜನೆ ಮಾಡುತ್ತಾ ಇತ್ತು. ಇದೀಗ ರಾಜ್ಯ ಸರ್ಕಾರವೇ ಕಾರ್ಯಕ್ರಮ ಮಾಡಲು ಮುಂದಾಗಿದೆ. 15 ರಿಂದ 20 ಕೋಟಿ ರೂ. ವೆಚ್ಚದಲ್ಲಿ 'ಬೆಂಗಳೂರು ಜಾತ್ರೆ' ಆಚರಣೆಗೆ ನಿರ್ಧರಿಸಲಾಗಿದೆ.

# ಪಾಕ್ ಉಗ್ರರೊಂದಿಗೆ ನಂಟು ಬೀದರನ ವಿಶಾಲ್ ಬಂಧನ

**ಬೀದರ್:** ರಾಷ್ಟ್ರೀಯ ತನಿಖಾ ಸಂಸ್ಥೆ (NIA) ಅಧಿಕಾರಿಗಳು ಬೀದರ್ ಪೊಲೀಸರ ಸಹಕಾರದೊಂದಿಗೆ ಪಾಕಿಸ್ತಾನ ಮೂಲದ ಘೋಷಿತ ಉಗ್ರ ಶಹಜಾದ್ ಭಟ್ಟಿ ಆಂಡ್ ಇತರರೊಂದಿಗೆ ಸಂಪರ್ಕ ಹೊಂದಿರುವ ಶಂಕೆ ಹಿನ್ನೆಲೆ ಬೀದರ್ ನ ಭಾಲ್ಕಿ ತಾಲೂಕಿನ ಯಣಕೂರ ಗ್ರಾಮದ ವಿಶಾಲ್ ಮೇತ್ರೆ ಎಂಬಾತನನ್ನು ಬಂಧಿಸಲಾಗಿದೆ.



ಭಾರತದ ಗ್ಯಾಂಗ್ ಸ್ಟರ್ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನಿಂದ ಹೊರಬಂದು ಪಾಕಿಸ್ತಾನದ ಪರವಾಗಿ ಶಹಜಾದ್ ಭಟ್ಟಿ ಉಗ್ರ ಚಟುವಟಿಕೆ ನಡೆಸುತ್ತಿದ್ದಾನೆ. ಇತನ್ನೊಂದಿಗೆ ಸಂಪರ್ಕ ಶಂಕೆ ಹಿನ್ನೆಲೆ ಯುಎಪಿಎ ಕಾಯ್ದೆಯಡಿ ವಿಶಾಲ್ ಮೇತ್ರೆಯನ್ನ ಎನ್‌ಐಎ ತಂಡ ಬಂಧಿಸಿದೆ. ವಿಶಾಲ್ ಮೇತ್ರೆಗೆ ಅಪರಾಧ ಹಿನ್ನೆಲೆ ಹೊಂದಿರುವ ಬಗ್ಗೆ ಮಾಹಿತಿ ಇದೆ. ಸದ್ಯ ಕೋರ್ಟ್ ಪ್ರಕ್ರಿಯೆ ನಡೆಯುತ್ತಿದ್ದು, ಪೂರ್ಣಗೊಂಡ ಬಳಿಕ ಹೆಚ್ಚಿನ ಮಾಹಿತಿ ನೀಡುವುದಾಗಿ' ಎಸ್‌ಪಿ ಪ್ರದೀಪ್ ಗುಂಟಿ ಪ್ರತಿಕ್ರಿಯಿಸಿದ್ದಾರೆ.

# ದಿಢೀರ್ ಕುಸಿದು ಬಿದ್ದ ದೀಪಾಲಂಕಾರದ ಬೃಹತ್ ಕಟೌಟ್

**ಮೈಸೂರು:** ವಿಶ್ವವಿಖ್ಯಾತ ಮೈಸೂರು ದಸರಾ 2026ರ ಆರಂಭಕ್ಕೆ ದಿನಗಣನೆ ಆರಂಭವಾಗಿದ್ದು, ಸಾಂಸ್ಕೃತಿಕ ನಗರಿಯಲ್ಲಿ ಭರ್ಜರಿ ಸಿದ್ಧತೆಗಳು ನಡೆಯುತ್ತಿವೆ. ಈ ಮಧ್ಯೆ ಶನಿವಾರ ಅರಮನೆ ಬಳಿ ಅಳವಡಿಸಿದ್ದ ದೀಪಾಲಂಕಾರದ ಬೃಹತ್ ಕಟೌಟ್ ವೊಂದು ದಿಢೀರ್ ಕುಸಿದು ಬಿದ್ದಿದೆ. ದಸರಾ ಆರಂಭಕ್ಕೂ ಮುನ್ನವೇ ಅಪಶಕುನವೆಂಬಂತೆ ದೀಪಾಲಂಕಾರದ ಕಟೌಟ್ ಮುರಿದುಬಿದ್ದಿದ್ದು, ದೊಡ್ಡ ಅನಾಹುತವೊಂದು ತಪ್ಪಿದೆ.



ಅರಮನೆ ಮುಂಭಾಗದ ಜೆಎಸ್‌ಎಸ್ ಮಹಾವಿದ್ಯಾಪೀಠದ ಸರ್ಕಲ್ ಬಳಿ ವಿದ್ಯುತ್ ದೀಪಾಲಂಕಾರದ ಕಟೌಟ್ ದಿಢೀರ್ ಟಿಟಿ ವಾಹನದ ಮೇಲೆ ಕುಸಿದು ಬಿದ್ದಿದೆ. ಅದೃಷ್ಟವಶಾತ್ ಈ ಸಮಯದಲ್ಲಿ ಟಿಟಿ ವಾಹನದಲ್ಲಿ ಆಗಮಿಸಿದ್ದ ವಿದ್ಯಾರ್ಥಿಗಳು ಅರಮನೆ ವೀಕ್ಷಣೆಗೆ ತೆರಳಿದ್ದರಿಂದ ಭಾರೀ ಅನಾಹುತವೊಂದು ತಪ್ಪಿದೆ. ಕಟೌಟ್ ಬಿದ್ದ ರಭಸಕ್ಕೆ ಟಿಟಿ ವಾಹನ ಜಖಂಗೊಂಡಿದೆ. ಘಟನೆ ನಡೆಯುತ್ತಿದ್ದಂತೆ ಸ್ಥಳಕ್ಕೆ ದೌಡಾಯಿಸಿದ ಪೊಲೀಸರು, ಅಧಿಕಾರಿಗಳು ಕುಸಿದ ಬಿದ್ದ ಕಟೌಟ್ ತೆರವುಗೊಳಿಸಿದ್ದು, ಗುತ್ತಿಗೆದಾರನ ನಿರ್ಲಕ್ಷ್ಯದಿಂದ ಈ ಅವಘಡ ಸಂಭವಿಸಿದೆ ಎನ್ನಲಾಗಿದೆ.

ಸತ್ಯ ಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

SATYA MITHI
Kannada Daily Morning

### ಅಬ್ಬಿಗೇರಿಯಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಭವ್ಯ ಮೆರವಣಿಗೆ

# ನೂತನ ರಥಕ್ಕೆ ರಂಭಾಪುರಿ ಜಗದ್ಗುರುಗಳಿಂದ ಚಾಲನೆ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಶರಣರ ಹೆಜ್ಜೆ ಗುರುತು, ಮಠಗಳ ಧಾರ್ಮಿಕ ಪರಂಪರೆ ಹಾಗೂ ಭಕ್ತಿಯ ಕಂಪನದಿಂದ ಅಬ್ಬಿಗೇರಿ ಗ್ರಾಮ ಶನಿವಾರ ಮಧ್ಯಾಹ್ನ ಕಂಗೊಳಿಸಿತು. ಸಮೀಪದ ಅಬ್ಬಿಗೇರಿ ಗ್ರಾಮದ ಹಿರೇಮಠದ ವತಿಯಿಂದ ಶ್ರೀ ಜಗದ್ಗುರು ರೇಣುಕಾಚಾರ್ಯ ಹಾಗೂ ಶ್ರೀ ಚಂದ್ರಶೇಖರ ಶಿವಾಚಾರ್ಯರ ಭಾವಚಿತ್ರಗಳ ಭವ್ಯ ಮೆರವಣಿಗೆ ಶ್ರದ್ಧಾ-ಭಕ್ತಿಯಿಂದ ಜರುಗಿತು.

ಮೆರವಣಿಗೆಯ ಅಂಗವಾಗಿ ನೂತನವಾಗಿ ನಿರ್ಮಿಸಲಾದ ರಥದ ಕಳಸ ಹಾಗೂ ತೇರಿನ ಹಗ್ಗವನ್ನು ಭಕ್ತರು ಭಕ್ತಿಭಾವದಿಂದ ಹೊತ್ತು ಸಾಗಿದರು. ಗ್ರಾಮ ಪಂಚಾಯಿತಿ ಕಚೇರಿಯಿಂದ ಆರಂಭಗೊಂಡ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳು ಹಾಗೂ ರಾಜ್ಯ ಹೆದ್ದಾರಿ ಮೂಲಕ ಸಾಗಿ ನರೇಗಲ್ಲ ರಸ್ತೆಯಲ್ಲಿರುವ ನೂತನ ಹಿರೇಮಠವನ್ನು ತಲುಪಿತು. ಮೆರವಣಿಗೆಯುದ್ದಕ್ಕೂ ಭಕ್ತರ ಜಯಘೋಷ, ಧಾರ್ಮಿಕ ಘೋಷಣೆಗಳು ಹಾಗೂ ಮಂಗಳವಾದ್ಯಗಳ ನಾದ ಮೊಳಗಿದ್ದು, ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ಶ್ರೀ ವೀರಭದ್ರ ಶಿವಾಚಾರ್ಯರು, ಅಬ್ಬಿಗೇರಿ ಗ್ರಾಮವು ಹಿಂದಿನಿಂದಲೂ ಭಕ್ತಿಭಾವಕ್ಕೆ ಹೆಸರಾಗಿದ್ದು, ಯಾವುದೇ ಧಾರ್ಮಿಕ ಕಾರ್ಯಕ್ರಮ ನಡೆದರೂ ಗ್ರಾಮಸ್ಥರು ಶ್ರದ್ಧೆಯಿಂದ ಪಾಲ್ಗೊಳ್ಳುವ ಪರಂಪರೆ ಹೊಂದಿದ್ದಾರೆ ಎಂದರು.

ಅಬ್ಬಿಗೇರಿ ಹಿರೇಮಠವು ತನ್ನದೇ ಆದ ಹಿರಿಮೆ, ಗರಿಮೆ ಹಾಗೂ ಶ್ರೀಮಂತ ಧಾರ್ಮಿಕ ಪರಂಪರೆಯನ್ನು ಹೊಂದಿದೆ. ಹಲವು



ವರ್ಷಗಳಿಂದ ಧಾರ್ಮಿಕ ಹಾಗೂ ಆಧ್ಯಾತ್ಮಿಕ ಚಟುವಟಿಕೆಗಳ ಮೂಲಕ ಸಮಾಜಕ್ಕೆ ಸಂಸ್ಕಾರ, ಜ್ಞಾನ ಮತ್ತು ಭಕ್ತಿಯ ಮಾರ್ಗವನ್ನು ತೋರಿಸುತ್ತಾ ಬಂದಿದೆ. ಈ ಮಠದಲ್ಲಿ ಅಧ್ಯಯನ ಮಾಡಿದ ಅನೇಕರು ಜಗದ್ಗುರುಗಳಾಗಿ ಹಾಗೂ ವಿವಿಧ ಮಠಗಳ ಮಠಾಧೀಶರಾಗಿ ನಾಡಿನ ಸೇವೆಯಲ್ಲಿ ತೊಡಗಿರುವುದು ಹಿರೇಮಠದ ವೈಭವಯುತ ಪರಂಪರೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

**ಭಕ್ತಿಯ ಹೆಜ್ಜೆ ಗುರುತು ಮೂಡಿಸಿದ ಮೆರವಣಿಗೆ:** ಮೆರವಣಿಗೆಯಲ್ಲಿ ಪಾಲ್ಗೊಂಡ ಭಕ್ತರು ಶ್ರೀ ಜಗದ್ಗುರು ರೇಣುಕಾಚಾರ್ಯ ಹಾಗೂ ಶ್ರೀ ಚಂದ್ರಶೇಖರ ಶಿವಾಚಾರ್ಯರ ಭಾವಚಿತ್ರಗಳಿಗೆ ಭಕ್ತಿಪೂರ್ವಕ ನಮನ ಸಲ್ಲಿಸಿದರು. ಮೆರವಣಿಗೆ ಶ್ರೀಮಠದ ಆವರಣ ತಲುಪುತ್ತಿದ್ದಂತೆ ಭಕ್ತರಲ್ಲಿ ಸಂಭ್ರಮ ಮನೆಮಾಡಿತು. ಧಾರ್ಮಿಕ ವಿಧಿ-ವಿಧಾನಗಳೊಂದಿಗೆ ನೂತನ ರಥದ ಕಳಸವನ್ನು ಏರಿಸಲಾಯಿತು.

ನಂತರ ರಂಭಾಪುರಿ ಪೀಠದ ಜಗದ್ಗುರುಗಳ ಸನ್ನಿಧಿಯಲ್ಲಿ ನೂತನ ರಥೋತ್ಸವಕ್ಕೆ ವಿಧ್ಯುಕ್ತವಾಗಿ ಚಾಲನೆ ನೀಡಲಾಯಿತು. ಈ ಕ್ಷಣ ಭಕ್ತರ ಪಾಲಿಗೆ ಅವಿಸ್ಮರಣೀಯವಾಗಿದ್ದು, ಶ್ರದ್ಧೆಭಕ್ತಿಯೊಂದಿಗೆ ರಥೋತ್ಸವವನ್ನು ಕಣ್ತುಂಬಿಕೊಂಡರು.

ಈ ಸಂದರ್ಭದಲ್ಲಿ ಷ.ಬ್ರ. ವಿಮಲರೇಣುಕ ಶಿವಾಚಾರ್ಯರು, ಷ.ಬ್ರ. ಶ್ರೀ ವೀರಭದ್ರ ಶಿವಾಚಾರ್ಯರು, ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು, ಶ್ರೀ ಬಸವರಾಜ ಶರಣರು, ಷ.ಬ್ರ. ಶ್ರೀ ವಿಶ್ವಾರಾಧ್ಯ ಶಿವಾಚಾರ್ಯರು ಸೇರಿದಂತೆ ವಿವಿಧ ಮಠಾಧೀಶರು, ವಿಧಾನಸಭಾಧ್ಯಕ್ಷ ಜಿ.ಎಸ್.ಪಾಟೀಲ, ಮಿಥುನ ಪಾಟೀಲ, ಅಕ್ಷಯ ಪಾಟೀಲ, ವೀರಯ್ಯ ಸೋಮನಕಟ್ಟಿಮಠ, ಸುರೇಶ ನಾಯಕರ, ಯೂಸೂಫ್ ಇಟಗಿ, ಅಂದಪ್ಪ ವೀರಾಪೂರ ಸೇರಿದಂತೆ ಹಲವು ಗಣ್ಯರು, ಧಾರ್ಮಿಕ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಅಬ್ಬಿಗೇರಿಯ ನೆಲದಲ್ಲಿ ಮೊಳಗಿದ ಧಾರ್ಮಿಕ ಘೋಷಗಳು, ಭಕ್ತರ ಉತ್ಸಾಹ ಹಾಗೂ ನೂತನ ರಥದ ವೈಭವವು ಗ್ರಾಮಕ್ಕೆ ಮತ್ತೊಮ್ಮೆ ತನ್ನ ಶ್ರೀಮಂತ ಧಾರ್ಮಿಕ ಪರಂಪರೆಯ ನೆನಪು ಮೂಡಿಸಿತು.

# ಗಾಂಧೀಜಿ-ಶಾಸ್ತ್ರಿ ಆದರ್ಶ ಸಮಾಜಕ್ಕೆ ಸದಾ ದಾರಿದೀಪ: ರವೀಂದ್ರನಾಥ ದೊಡ್ಡಮೇಟಿ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಮಹಾತ್ಮ ಗಾಂಧೀಜಿಯವರ ಸತ್ಯ, ಅಹಿಂಸೆ, ಸರಳತೆ ಹಾಗೂ ಸ್ವಚ್ಛತೆಯ ತತ್ವಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ. ಲಾಲ್ ಬಹದ್ದೂರ್ ಶಾಸ್ತ್ರಿಯವರ ಸರಳ ಜೀವನ, ಪ್ರಾಮಾಣಿಕತೆ, ದೇಶಭಕ್ತಿ, ಶಿಸ್ತು ಹಾಗೂ ಕರ್ತವ್ಯನಿಷ್ಠೆ ಪ್ರತಿಯೊಬ್ಬರಿಗೂ ಆದರ್ಶವಾಗಬೇಕು ಎಂದು ರವೀಂದ್ರನಾಥ ದೊಡ್ಡಮೇಟಿ ಹೇಳಿದರು.

ಇಲ್ಲಿನ ಬಸವೇಶ್ವರ ಸಿಬಿಎಸ್ಇ ಸ್ಕೂಲ್‌ನಲ್ಲಿ ಆಯೋಜಿಸಿದ್ದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಗಾಂಧೀಜಿಯವರು ಸತ್ಯ ಮತ್ತು ಅಹಿಂಸೆಯ ಮಾರ್ಗವನ್ನು ಅನುಸರಿಸುವ ಮೂಲಕ ಭಾರತದ ಸ್ವಾತಂತ್ರ್ಯ ಹೋರಾಟಕ್ಕೆ ವಿಶಿಷ್ಟ ದಿಕ್ಕು ನೀಡಿದರು. ಯಾವುದೇ ಹಿಂಸೆಯಿಲ್ಲದೆ ಸತ್ಯ ಮತ್ತು ನೈತಿಕತೆ-ಯ ಶಕ್ತಿಯಿಂದ ದೊಡ್ಡ ಬದಲಾವಣೆ ತರಬಹುದು ಎಂಬುದನ್ನು ತಮ್ಮ ಬದುಕಿನ ಮೂಲಕ ಜಗತ್ತಿಗೆ ತೋರಿಸಿಕೊಟ್ಟರು. ಅವರ ಸರಳ ಜೀವನ, ಸ್ವಾವಲಂಬನೆ, ಸ್ವಚ್ಛತೆ ಹಾಗೂ ಮಾನವೀಯ ಮೌಲ್ಯಗಳು ಇಂದಿನ ಸಮಾಜಕ್ಕೂ ಅತ್ಯಂತ ಪ್ರಸ್ತುತವಾಗಿವೆ ಎಂದು ಹೇಳಿದರು.

ಗಾಂಧೀಜಿಯವರ ದೃಷ್ಟಿಯಲ್ಲಿ ಶಿಕ್ಷಣವೆಂದರೆ ಕೇವಲ ಅಂಕ ಗಳಿಸುವುದಲ್ಲ. ಜ್ಞಾನ, ಉತ್ತಮ ನಡತೆ,




ಶ್ರಮದ ಗೌರವ, ಸ್ವಚ್ಛತೆ ಹಾಗೂ ಸಮಾಜದ ಬಗ್ಗೆ ಕಾಳಜಿ ಬೆಳೆಸಿಕೊಳ್ಳುವುದೂ ಶಿಕ್ಷಣದ ಪ್ರಮುಖ ಭಾಗವಾಗಿದೆ. ವಿದ್ಯಾರ್ಥಿಗಳು ಬಾಲ್ಯದಿಂದಲೇ ಸತ್ಯವನ್ನು ಮಾತನಾಡುವುದು, ಇತರರನ್ನು ಗೌರವಿಸುವುದು, ಸ್ವಚ್ಛತೆಯನ್ನು ಕಾಪಾಡುವುದು ಹಾಗೂ ಅಗತ್ಯವಿರುವವರಿಗೆ ನೆರವಾಗುವ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದರು.

ಲಾಲ್ ಬಹದ್ದೂರ್ ಶಾಸ್ತ್ರಿಯವರು ತಮ್ಮ ಸರಳತೆ, ಪ್ರಾಮಾಣಿಕತೆ ಹಾಗೂ ದೇಶಸೇವೆಯ ಮೂಲಕ ಸಾರ್ವಜನಿಕ ಜೀವನಕ್ಕೆ ಮಾದರಿಯಾಗಿದ್ದರು. ಪ್ರಧಾನಮಂತ್ರಿಯಂತಹ ಉನ್ನತ ಹುದ್ದೆಯಲ್ಲಿದ್ದರೂ ಸರಳ ಜೀವನ ನಡೆಸಿದ ಅವರು, ದೇಶದ ಹಿತಕ್ಕಾಗಿ ಕಠಿಣ ನಿರ್ಧಾರಗಳನ್ನು ಕೈಗೊಳ್ಳುವ ಧೈರ್ಯ ಮತ್ತು ಕರ್ತವ್ಯನಿಷ್ಠೆಯನ್ನು ಪ್ರದರ್ಶಿಸಿದ್ದರು. ಸೈನಿಕರು ದೇಶವನ್ನು ರಕ್ಷಿಸುವಂತೆ ರೈತರು ದೇಶಕ್ಕೆ ಅನ್ನ ನೀಡುತ್ತಾರೆ ಎಂಬುದನ್ನು ಸಾರಲು ಅವರು ನೀಡಿದ 'ಜೈ ಜವಾನ್, ಜೈ ಕಿಸಾನ್' ಘೋಷಣೆ ದೇಶದ ಜನರಲ್ಲಿ ಹೊಸ ಆತ್ಮವಿಶ್ವಾಸ ಮೂಡಿಸಿತ್ತು ಎಂದು ಸ್ಮರಿಸಿದರು.

ಇಂದಿನ ಯುವಜನತೆ ಹಾಗೂ ವಿದ್ಯಾರ್ಥಿಗಳು ಗಾಂಧೀಜಿ ಮತ್ತು ಶಾಸ್ತ್ರಿಯವರ ಜೀವನವನ್ನು ಕೇವಲ ಜಯಂತಿ ದಿನದಂದು ಸ್ಮರಿಸುವುದಕ್ಕೆ ಸೀಮಿತಗೊಳಿಸದೆ, ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡುವ ಮನೋಭಾವ ಬೆಳೆಸಿಕೊಂಡಾಗ ಮಾತ್ರ ಮಹನೀಯರ ಕನಸಿನ ಭಾರತ ನಿರ್ಮಾಣ ಸಾಧ್ಯವಾಗುತ್ತದೆ ಎಂದು ರವೀಂದ್ರನಾಥ ದೊಡ್ಡಮೇಟಿ ಹೇಳಿದರು.

ಶಾಲೆಯ ಪ್ರಾಚಾರ್ಯ ಬಿ.ಹೆಚ್. ಬಂಡಿಹಾಳ್ ಮಾತನಾಡಿ, ವಿದ್ಯಾರ್ಥಿಗಳು ಗಾಂಧೀಜಿ ಹಾಗೂ ಶಾಸ್ತ್ರಿಯವರ ಜೀವನಮೌಲ್ಯಗಳನ್ನು ಅರಿತು ಸತ್ಯ, ಶಿಸ್ತು, ಸೇವಾಭಾವನೆ ಮತ್ತು ದೇಶಪ್ರೇಮವನ್ನು ದೈನಂದಿನ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಉತ್ತಮ ಚಿಂತನೆ, ನಡತೆ ಹಾಗೂ ಜವಾಬ್ದಾರಿಯುತ ಮನೋಭಾವ ಬೆಳೆಸಿಕೊಳ್ಳುವ ಮೂಲಕ ಭವಿಷ್ಯದ ಉತ್ತಮ ನಾಗರಿಕರಾಗಿ ರೂಪುಗೊಳ್ಳಬೇಕು. ವಿದ್ಯಾರ್ಥಿಗಳಲ್ಲಿ ದೇಶಭಕ್ತಿ ಹಾಗೂ ಸಾಮಾಜಿಕ ಜವಾಬ್ದಾರಿಯ ಅರಿವು ಮೂಡಿಸುವಲ್ಲಿ ಇಂತಹ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದರು.

ಕಾರ್ಯಕ್ರಮದ ಆರಂಭದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಲಾಯಿತು. ವಿದ್ಯಾರ್ಥಿಗಳು ಇಬ್ಬರು ಮಹನೀಯರ ಜೀವನ, ಸಾಧನೆ ಹಾಗೂ ಆದರ್ಶಗಳನ್ನು ಸ್ಮರಿಸಿದರು. ಗಾಂಧೀಜಿಯವರ ಸತ್ಯ, ಅಹಿಂಸೆ ಮತ್ತು ಶಾಸ್ತ್ರಿಯವರ ಸರಳತೆ-ದೇಶಭಕ್ತಿಯ ಸಂದೇಶವನ್ನು ವಿದ್ಯಾರ್ಥಿಗಳಿಗೆ ಪರಿಚಯಿಸಲಾಯಿತು.

ಶಾಲೆಯ ಸಂಯೋಜಕಿ ಶ್ವೇತಾ ಗೋವಿಂದ, ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿ ಉಪಸ್ಥಿತರಿದ್ದರು. ದೇಶಭಕ್ತಿ, ಸತ್ಯ, ಅಹಿಂಸೆ, ಸರಳತೆ, ಶಿಸ್ತು ಹಾಗೂ ಸೇವಾಭಾವನೆಯ ಮಹತ್ವವನ್ನು ಸಾರುವ ಮೂಲಕ ಕಾರ್ಯಕ್ರಮ ಅರ್ಥಪೂರ್ಣವಾಗಿ ನೆರವೇರಿತು.

## ಡೋಣಿ ನ್ಯಾಯಬೆಲೆ ಅಂಗಡಿಯಲ್ಲಿ ಅವ್ಯವಸ್ಥೆ: ಮೂಲಸೌಕರ್ಯ ಕಲ್ಪಿಸಲು ಆಗ್ರಹ

**ಸತ್ಯಮಿಥ್ಯ ಸುದ್ದಿಮೂಲ ಮುಂಡರಗಿ:**
ತಾಲೂಕಿನ ಡೋಣಿ ಗ್ರಾಮದ ನ್ಯಾಯಬೆಲೆ ಅಂಗಡಿ ಸಂಖ್ಯೆ-13 (ವಿ.ಎಸ್.ಎಸ್. ಬ್ಯಾಂಕ್)ನಲ್ಲಿ ಪಡಿತರ ವಿತರಣೆ ವ್ಯವಸ್ಥೆಯನ್ನು ಸುಧಾರಿಸಿ, ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಶ್ರೀ ಡಾ. ಪಂ. ಪುಟ್ಟರಾಜ ರೈತ ಸಂಘದ ವತಿಯಿಂದ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಲಾಯಿತು.

ನ್ಯಾಯಬೆಲೆ ಅಂಗಡಿಗೆ ಪಡಿತರ ಪಡೆಯಲು ಆಗಮಿಸುವ ಗ್ರಾಮಸ್ಥರು ಬಿಸಿಲು, ಮಳೆ, ಗಾಳಿ ಹಾಗೂ ಚಳಿಯಲ್ಲಿಯೇ ಬಯಲಿನಲ್ಲಿ ಗಂಟೆಗಟ್ಟಲೆ ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ವಿಶೇಷವಾಗಿ ವೃದ್ಧರು, ಮಹಿಳೆಯರು ಹಾಗೂ ಮಕ್ಕಳು ತೊಂದರೆ ಅನುಭವಿಸುತ್ತಿದ್ದು, ಸಾರ್ವಜನಿಕರಿಗೆ ಸಮರ್ಪಕ ನೆರಳಿನ ವ್ಯವಸ್ಥೆ ಕಲ್ಪಿಸಬೇಕೆಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಅಲ್ಲದೆ, ನ್ಯಾಯಬೆಲೆ ಅಂಗಡಿಯಲ್ಲಿ ಸರ್ಕಾರದ ವಿವಿಧ ಯೋಜನೆಗಳು, ಪಡಿತರ ವಿತರಣೆ ಹಾಗೂ ಸಾರ್ವಜನಿಕರಿಗೆ ಅಗತ್ಯವಿರುವ ಮಾಹಿತಿಯನ್ನು ಒಳಗೊಂಡ ಸೂಚನಾ ಫಲಕಗಳನ್ನು ಸಮರ್ಪಕವಾಗಿ ಅಳವಡಿಸಿಲ್ಲ. ಅಂಗಡಿಯ ಪರವಾನಗಿ ಹಾಗೂ ಸರ್ಕಾರದ ನಿಯಮಗಳನ್ನು ಪಾಲಿಸಲಾಗುತ್ತಿದೆಯೇ ಎಂಬುದರ ಬಗ್ಗೆಯೂ ಪರಿಶೀಲನೆ ನಡೆಸಬೇಕೆಂದು ಮನವಿ ಮಾಡಲಾಗಿದೆ.

ಈ ಕುರಿತು ಈ ಹಿಂದೆಯೂ ಮಾಧ್ಯಮಗಳ ಮೂಲಕ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳ ಗಮನಕ್ಕೆ ಸಮಸ್ಯೆ ತರಲಾಗಿದ್ದರೂ, ಇದುವರೆಗೆ ಸೂಕ್ತ ಪರಿಹಾರ ದೊರೆತಿಲ್ಲ ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಪಡಿತರ ಪಡೆಯಲು ಬರುವ ಸಾರ್ವಜನಿಕರಿಗೆ ಅಗತ್ಯ ನೆರಳಿನ ವ್ಯವಸ್ಥೆ ಇಲ್ಲದೆ, ಅಂಗಡಿ ನಿರ್ವಹಿಸುವವರಿಗೆ ಮಾತ್ರ ನೆರಳಿನ ವ್ಯವಸ್ಥೆ ಮಾಡಲಾಗಿದೆ ಎಂಬ ಆರೋಪವೂ ಕೇಳಿಬಂದಿದೆ.

ಆದ್ದರಿಂದ ಜಿಲ್ಲಾಡಳಿತ ಹಾಗೂ ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಸ್ಥಳ ಪರಿಶೀಲನೆ ನಡೆಸಿ, ನ್ಯಾಯಬೆಲೆ ಅಂಗಡಿಯಲ್ಲಿ ಸಾರ್ವಜನಿಕರಿಗೆ ನೆರಳು, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಬೇಕು. ಪಡಿತರ ವಿತರಣೆ ವ್ಯವಸ್ಥೆ, ಅಂಗಡಿಯ ಪರವಾನಗಿ ಹಾಗೂ ಸರ್ಕಾರದ ನಿಯಮಗಳ ಪಾಲನೆಯ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ. ಯಾವುದೇ ನಿಯಮ ಉಲ್ಲಂಘನೆ ಕಂಡುಬಂದಲ್ಲಿ ಸಂಬಂಧಿಸಿದವರ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಂಡು, ಅಗತ್ಯವಿದ್ದಲ್ಲಿ ಪರವಾನಗಿ ರದ್ದುಪಡಿಸಿ ಅರ್ಹರಿಗೆ ನ್ಯಾಯಬೆಲೆ ಅಂಗಡಿ ವಹಿಸಿಕೊಡಬೇಕು. ಡೋಣಿ ಗ್ರಾಮದ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಪಡಿತರ ವಿತರಣೆ ವ್ಯವಸ್ಥೆಯನ್ನು ಪಾರದರ್ಶಕ ಹಾಗೂ ನಿಯಮಬದ್ಧವಾಗಿ ನಡೆಸಲು ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಮನವಿದಾರರು ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಶ್ರೀ ಡಾ. ಪಂ. ಪುಟ್ಟರಾಜ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಶ್ರೀ ಬಸವರಾಜ ಭೋವಿವಡ್ಡರ ಹಾಗೂ ಉಪಾಧ್ಯಕ್ಷ ಮಂಜಪ್ಪ ಬುರ್ಲಿ ಸಂಘದ ಸದಸ್ಯರು ಗ್ರಾಮಸ್ಥರು ಉಪಸ್ಥಿತರಿದ್ದರು.



## ರಸ್ತೆ ಅವ್ಯವಸ್ಥೆ ವಾಹನ ಸವಾರರ ಸಂಚಾರಕ್ಕೆ ಪರದಾಟ – ಕಣ್ಮುಚ್ಚಿ ಕುಳಿತ ಅಧಿಕಾರಿಗಳು

**ಸತ್ಯಮಿಥ್ಯ ಸುದ್ದಿಮೂಲ ಮುಳಗುಂದ:**
ಪಟ್ಟಣದಿಂದ ಲಕ್ಷ್ಮೇಶ್ವರಕ್ಕೆ ಸಂಪರ್ಕ ಕಲ್ಪಿಸುವ ರಾಜ್ಯ ಹೆದ್ದಾರಿ-64ರ ಪಾಳಾ-ಬಾದಾಮಿ ರಸ್ತೆಯು ಸಂಪೂರ್ಣ ಹದಗೆಟ್ಟಿದ್ದು, ರಸ್ತೆಯುದ್ದಕ್ಕೂ ತಗ್ಗು-ಗುಂಡಿಗಳು ಉಂಟಾಗಿರುವುದರಿಂದ ವಾಹನ ಸವಾರರು ಪರದಾಡುವಂತಾಗಿದೆ.

ಮುಳಗುಂದ-ಮಾಗಡಿ ಗ್ರಾಮದ ನಡುವಿನ ರಸ್ತೆಯನ್ನು ಸುಮಾರು ಒಂದು ದಶಕದ ಹಿಂದೆ ಅಭಿವೃದ್ಧಿಪಡಿಸಲಾಗಿತ್ತು.

ಆದರೆ ನಿರ್ವಹಣೆ ಹಾಗೂ ದುರಸ್ತಿ ಕಾರ್ಯಕ್ಕೆ ನಿರ್ಲಕ್ಷ್ಯ ವಹಿಸಿದ ಪರಿಣಾಮವಾಗಿ ರಸ್ತೆ ಸಂಪೂರ್ಣ ಹಾಳಾಗಿದೆ. ರಸ್ತೆಯ ಮಧ್ಯೆ ಮೊಣಕಾಲುದ್ದದಷ್ಟು ಆಳವಾದ ಗುಂಡಿಗಳು ಬಿದ್ದಿದ್ದು, ಕೆಲವೆಡೆ ರಸ್ತೆಯೇ ಕಾಣದಂತಾಗಿದೆ. ಈ ಮಾರ್ಗವಾಗಿ ಬೆಂಗಳೂರು ಸೇರಿದಂತೆ ವಿವಿಧ ನಗರಗಳಿಗೆ ನಿತ್ಯ ಹೆಚ್ಚಿನ ಸಂಖ್ಯೆಯಲ್ಲಿ ಬಸ್‌ಗಳು ಹಾಗೂ ನೂರಾರು ವಾಹನಗಳು ಸಂಚರಿಸುತ್ತವೆ. ಪ್ರಮುಖ ಸಂಪರ್ಕ ರಸ್ತೆಯಾಗಿದ್ದರೂ ಹಲವು ವರ್ಷಗಳಿಂದ ರಸ್ತೆ ದುರಸ್ತಿಯಾಗದೇ ಇರುವುದರಿಂದ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

ದ್ವಿಚಕ್ರವಾಹನ ಸವಾರರು ಗುಂಡಿಗಳಿಂದ ತಪ್ಪಿಸಿಕೊಂಡು ಸಂಚರಿಸುವುದು ಸಾಹಸದ ಕೆಲಸವಾಗಿದೆ. ರಾತ್ರಿ ವೇಳೆ ಗುಂಡಿಗಳು ಸರಿಯಾಗಿ ಕಾಣದೇ ಅಪಘಾತ ಸಂಭವಿಸುವ ಆತಂಕ ಎದುರಾಗಿದೆ. ಈಗಾಗಲೇ ದ್ವಿಚಕ್ರ ವಾಹನ ಸವಾರರು ಬಿದ್ದು ಗಾಯಗೊಂಡ ಘಟನೆಗಳು ನಡೆದಿವೆ ಎಂದು ಸ್ಥಳೀಯರು ತಿಳಿಸಿದರು. ಈಚೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಗದಗ ಜಿಲ್ಲೆ ಬರ ಪರಿಶೀಲನೆ ಪ್ರವಾಸಕ್ಕೆ ಬಂದಾಗ ತರಾತುರಿಯಲ್ಲಿ ಗುಂಡಿ ಮುಚ್ಚುವ ಕೆಲಸವನ್ನು ಲೋಕೋಪಯೋಗಿ ಇಲಾಖೆ ಮಾಡಿತ್ತು. ಆದರೆ ಸಂಪೂರ್ಣ ದುರಸ್ತಿ ಆಗದೇ



ಉಳಿದಿದೆ. ರಸ್ತೆ ದುರಸ್ತಿ ಮಾಡುವಂತೆ ಸಂಬಂಧಿಸಿದ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ ಎಂದು ಎಂದು ಪಟ್ಟಣ ಪಂಚಾಯಿತಿ ಮಾಜಿ ಸದಸ್ಯ ಮಹಾಂತೇಶ ಕಣವಿ ಅಸಮಾಧಾನ ವ್ಯಕ್ತಪಡಿಸಿದರು.

ರಸ್ತೆ ದುಃಸ್ಥಿತಿಯಿಂದಾಗಿ ಗದಗ-ಲಕ್ಷ್ಮೇಶ್ವರ ನಡುವೆ ಸಂಚರಿಸುವ ಕೆಲವು ವಾಹನಗಳು ನಾಗಾವಿ, ಶಿರಹಟ್ಟಿ ಮಾರ್ಗವನ್ನು ಅವಲಂಬಿಸುವಂತಾಗಿದೆ. ಇದರಿಂದಾಗಿ ಹೆಚ್ಚುವರಿ ದೂರವನ್ನು ಪ್ರಯಾಣಿಸಬೇಕಾಗಿದ್ದರೂ, ರಸ್ತೆ ಸಮಸ್ಯೆಗಿಂತ ಜೀವದ ಸುರಕ್ಷತೆಯೇ ಮುಖ್ಯ ಎಂದು ವಾಹನ ಸವಾರರು ಪರ್ಯಾಯ ಮಾರ್ಗ ಬಳಸುವಂತಾಗಿದೆ.

'ಗದಗ ಲೋಕೋಪಯೋಗಿ ಇಲಾಖೆ ಎಂಜಿನಿಯರ್ ಎಂ.ಎಸ್.ಪಾಟೀಲ ಅವರಿಗೆ ಈ ಬಗ್ಗೆ ಹಲವು ಬಾರಿ ಕರೆ ಮಾಡಿದರೂ ಕರೆ ಸ್ವೀಕರಿಸಲಿಲ್ಲ.

ರಸ್ತೆ ಕಿತ್ತುಹೋಗಿ ವರ್ಷಗಳೇ ಕಳೆದಿವೆ. ಹಿಂದೆ ಅರ್ಧ ಗಂಟೆಯಲ್ಲಿ ಗದಗ ತಲುಪುತ್ತಿದ್ದವರು ಈಗ ತಗ್ಗು-ಗುಂಡಿಗಳಿಂದಾಗಿ ಗಂಟೆಗಟ್ಟಲೆ ಸಮಯ ವ್ಯಯಿಸುವಂತಾಗಿದೆ. ವಾಹನಗಳಿಗೂ ಹಾನಿಯಾಗುತ್ತಿದ್ದು, ಅಪಘಾತದ ಭೀತಿ ಎದುರಾಗಿದೆ. ಕೂಡಲೇ ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಬೇಕು. ರಾಜ್ಯ ಹೆದ್ದಾರಿ-64ರ ಮುಳಗುಂದ-ಮಾಗಡಿ-ಲಕ್ಷ್ಮೇಶ್ವರ ಮಾರ್ಗದ ರಸ್ತೆ ದುಃಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿ, ತಾತ್ಕಾಲಿಕ ಗುಂಡಿ ಮುಚ್ಚುವ ಕಾಮಗಾರಿಯ ಜೊತೆಗೆ ಶಾಶ್ವತ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ತ್ವರಿತವಾಗಿ ಕೈಗೊಳ್ಳಬೇಕು' ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ಕಾಗಿನೆಲೆ ಕನಕ ಗುರುಪೀಠದಲ್ಲಿ ಕುರುಬರ ಸಂಘಗಳ ಸಭೆ ಇಂದು

ಹಾವೇರಿ: ಜಿಲ್ಲೆಯ ಕಾಗಿನೆಲೆಯ ಶ್ರೀ ಕನಕ ಗುರುಪೀಠದಲ್ಲಿ ಅಕ್ಟೋಬರ್ 4ರಂದು ಹಾವೇರಿ ತಾಲೂಕು ಕುರುಬರ ಸಂಘ ಹಾಗೂ ತಾಲೂಕು ಶ್ರೀ ಕನಕ ನೌಕರರ ಸಂಘದ ಸಭೆಯನ್ನು ಆಯೋಜಿಸಲಾಗಿದೆ ಎಂದು ತಾಲೂಕು ಕುರುಬರ ಸಂಘದ ಅಧ್ಯಕ್ಷ ವೀರಪಾಕ್ಷ ಹುಲ್ಲೂರ ತಿಳಿಸಿದ್ದಾರೆ.

ಶ್ರೀ ಕನಕ ಗುರುಪೀಠದ ಜಗದ್ಗುರುಗಳಾದ ಶ್ರೀ ನಿರಂಜನಾನಂದ ಪುರಿ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ನಡೆಯಲಿರುವ ಈ ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ನಾಗರಾಜ ಆನ್ವೇರಿ ವಹಿಸಲಿದ್ದಾರೆ.

ಮುಂಬರುವ ನವೆಂಬರ್‌ನಲ್ಲಿ ನಡೆಯಲಿರುವ ಶ್ರೀ ಕನಕ ಜಯಂತೋತ್ಸವ ಹಾಗೂ ಶ್ರೀ ಕನಕ ರಥೋತ್ಸವದ ಪೂರ್ವಭಾವಿ ಸಿದ್ಧತೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು. ಈ ವರ್ಷದ ಶ್ರೀ ಕನಕ ಜಯಂತೋತ್ಸವ ಹಾಗೂ ರಥೋತ್ಸವದ ಜವಾಬ್ದಾರಿಯನ್ನು ಹಾವೇರಿ ತಾಲೂಕು ಕುರುಬರ ಸಂಘ ಮತ್ತು ಶ್ರೀ ಕನಕ ನೌಕರರ ಸಂಘ ವಹಿಸಿಕೊಂಡಿವೆ.



# ಕರುನಾಡಲ್ಲಿ ಹುಲಿಬೀರನ ಸದ್ದು

## ಗಜೇಂದ್ರಗಡದ ಅಲಂಕಾರ ಥಿಯೇಟರ್‌ನಲ್ಲಿ ಭರ್ಜರಿ ಪ್ರದರ್ಶನ | ಚಿತ್ರತಂಡದಿಂದ ಪತ್ರಿಕಾಗೋಷ್ಠಿ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ಉತ್ತರ ಕರ್ನಾಟಕದ ರಗಡ್ ಭಾಷೆ, ಸಂಸ್ಕೃತಿ ಹಾಗೂ ಮಣ್ಣಿನ ಸೊಗಡಿನೊಂದಿಗೆ ತೆರೆಕಂಡು ರಾಜ್ಯಾಂತ ಸದ್ದು ಮಾಡುತ್ತಿರುವ 'ಹುಲಿಬೀರ್' ಕನ್ನಡ ಚಲನಚಿತ್ರಕ್ಕೆ ಪ್ರೇಕ್ಷಕರಿಂದ ಅಭೂತಪೂರ್ವ ಅಭಿನಂದನೆ ಮತ್ತು ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಈ ಯಶಸ್ಸಿನ ಖುಷಿಯಲ್ಲಿ ಚಿತ್ರತಂಡವು ನಗರದ ಅಲಂಕಾರ ಚಿತ್ರಮಂದಿರಕ್ಕೆ ಭೇಟಿ ನೀಡಿ, ಕಿಕ್ಕಿರಿದು ಸೇರಿದ್ದ ಅಭಿಮಾನಿಗಳು ಹಾಗೂ ಪ್ರೇಕ್ಷಕರೊಂದಿಗೆ ಕುಳಿತು ಸಿನಿಮಾ ವೀಕ್ಷಿಸಿತು.

**ಪ್ರೇಕ್ಷಕರ ಸಹಕಾರವೇ ದೊಡ್ಡ ಶಕ್ತಿ**

ಚಿತ್ರತಂಡದ ಆಗಮನದಿಂದ ಹರ್ಷಗೊಂಡ ಅಭಿಮಾನಿಗಳು ಹಾಗೂ ಪ್ರೇಕ್ಷಕರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

**ಮಣ್ಣಿನ ಸೊಗಡಿನ ನೈಜ ಕಥೆ– ನಿರ್ದೇಶಕ ಮದರಂಗಿ ಮಲ್ಲಿಕಾರ್ಜುನ:** ಚಿತ್ರದ ನಿರ್ದೇಶಕ ಮದರಂಗಿ ಮಲ್ಲಿಕಾರ್ಜುನ ಮಾತನಾಡಿ, "ಸಾಮಾನ್ಯವಾಗಿ ಮಚ್ಚು, ಲಾಂಗ್ ಹಾಗೂ ಮಾಫಿಯಾ ಹಿನ್ನೆಲೆಯ ಕಥೆಗಳೇ ಹೆಚ್ಚು ಬರುತ್ತವೆ. ಆದರೆ ನಾವು ಉತ್ತರ ಕರ್ನಾಟಕದ ನೈಜ ಸೊಗಡನ್ನು ಹೊಂದಿರುವ ವಿಶಿಷ್ಟ ಕಥೆಯನ್ನು ಆಯ್ಕೆ ಮಾಡಿಕೊಂಡೆವು. ಬಾದಾಮಿ, ಸೌದತ್ತಿ ಯಲ್ಲಮ್ಮನ ಗುಡ್ಡ ಸೇರಿದಂತೆ ಹಲವು ಸುಂದರ ತಾಣಗಳಲ್ಲಿ ಶೂಟಿಂಗ್ ನಡೆಸಲಾಗಿದೆ. ಬಹುತೇಕ ಸ್ಥಳೀಯ ಕಲಾವಿದರೇ ಅಭಿನಯಿಸಿದ್ದು, ಪ್ರತಿಯೊಬ್ಬರೂ ಶೂಟಿಂಗ್ ವೇಳೆ ಅದ್ಭುತ ಸಹಕಾರ ನೀಡಿದ್ದಾರೆ. ಪ್ರೇಕ್ಷಕರಿಂದ ಸಿಗುತ್ತಿರುವ ಬೆಂಬಲ ನಮಗೆ ದೊಡ್ಡ ಶಕ್ತಿ ತಂದಿದೆ" ಎಂದರು.

**ಗಜೇಂದ್ರಗಡದ ಜನತೆ ಹುಲಿಬೀರ್ ಚಿತ್ರಕ್ಕೆ ಅದ್ಭುತ ರೆಸ್ಪಾನ್ಸ್ – ನಟ ಅಂಜನ್:**ಸಿನಿಮಾವೀಕ್ಷಿಸಿದಬಳಿಕಮಾಧ್ಯಮದೊಂದಿಗೆಮಾತನಾಡಿದ ಚಿತ್ರದ ನಾಯಕ ನಟ, ಅಂಜನ್, "ಗಜೇಂದ್ರಗಡದ ಜನತೆ ಹುಲಿಬೀರ್ ಚಿತ್ರಕ್ಕೆ ಅದ್ಭುತ ರೆಸ್ಪಾನ್ಸ್ ನೀಡಿದ್ದಾರೆ. ಚಿತ್ರ ನೋಡುವಾಗ ಪ್ರೇಕ್ಷಕ ತಾನೇ ಈ ಕಥೆಯ ಭಾಗವಾಗುತ್ತಾನೆ. ಉತ್ತರ ಕರ್ನಾಟಕದ ಭಾಷೆ, ಸಂಸ್ಕೃತಿ, ಜನರ ನಡವಳಿಕೆ, ಸ್ಥಳೀಯ ರಾಜಕೀಯ ತಂತ್ರಗಾರಿಕೆ, ಲವ್ ಫೇಲ್ಯೂರ್ ಹಾಗೂ ಯಲ್ಲಮ್ಮ ದೇವಿಯ ಪವಾಡದಂತಹ ಹಲವು ನೈಜ ಎಳೆಗಳನ್ನು ಈ ಸಿನಿಮಾ ಒಳಗೊಂಡಿದೆ. ಸಂಪೂರ್ಣವಾಗಿ ಉತ್ತರ ಕರ್ನಾಟಕದ ಪ್ರತಿಭೆಗಳೇ ಸೇರಿ ಮಾಡಿರುವ ಚಿತ್ರವಿದು. ನಮ್ಮ ತಾಯ್ನಾಡಿನ ಕಲಾವಿದರು ರಾಷ್ಟ್ರಮಟ್ಟದಲ್ಲಿ ಮಿಂಚಲು ಪ್ರತಿಯೊಬ್ಬರೂ ಥಿಯೇಟರ್‌ಗೆ ಬಂದು ಸಿನಿಮಾ ನೋಡಿ ಪ್ರೋತ್ಸಾಹಿಸಬೇಕು" ಎಂದು ವಿನಂತಿಸಿದರು.

**"ಹುಲಿಬೀರ" ಗೆದ್ದರೆ ಸ್ಥಳೀಯ ಕಲಾವಿದರಿಗೆ ದೊಡ್ಡ ಭವಿಷ್ಯ : ನಾಗರಾಜ ನಿಲುಗಲ್:** ಅನೇಕ ಕಿರು ಚಿತ್ರಗಳಲ್ಲಿ 'ಗೌಡ' ' ಬೀಡಿ ನಾಗ್ಯಾ' ಪಾತ್ರದ ಮೂಲಕ ಖಳನಾಯಕ ನಟನಾಗಿ ಗಮನಸೆಳೆದಿರುವ ನಾಗರಾಜ ನಿಲುಗಲ್ ಈ ಚಿತ್ರದಲ್ಲಿ ಖಳನಾಯಕನಾಗಿ ತನ್ನ ಪೈಯರ್ ಡೈಲಾಗ್ ಗಳ ಮೂಲಕ ಪ್ರೇಕ್ಷಕ ಪ್ರಭುವಿನ ಮನವನ್ನು ಮತ್ತೊಮ್ಮೆ ಗೆದ್ದಿರುವ ನಾಗರಾಜ ಮಾಧ್ಯಮದವರೊಂದಿಗೆ ಮಾತನಾಡಿ, "ಸಿನಿಮಾ ನೋಡಿ ಹೊರಬರುವ ಪ್ರತಿಯೊಬ್ಬ ವೀಕ್ಷಕನಿಗೂ ಇದು ತನ್ನದೇ ಊರಿನ ಕಥೆ, ತನ್ನದೇ ಪಾತ್ರ ಮತ್ತು ತಮ್ಮ ಸುತ್ತಮುತ್ತಲಿನ ರಾಜಕೀಯ ವ್ಯವಸ್ಥೆ ಎನಿಸುತ್ತದೆ.ನಾನು ಗಜೇಂದ್ರಗಡದಲ್ಲಿ ಡಿಪ್ಲೋಮ ವಿದ್ಯಾರ್ಥಿಯಾಗಿ ಶಿಕ್ಷಣ ಪಡೆದಿದ್ದೇನೆ ನಾನು ನಟಿಸಿರುವ ಚಲನಚಿತ್ರನೋಡಲು ನನ್ನಹಳೆಯ ಗೆಳೆಯರ ಬಂದು ಚಿತ್ರದ ಬಗ್ಗೆ ನನ್ನ ಪಾತ್ರದ ಬಗ್ಗೆ ವಿಮರ್ಶೆ ಮಾಡುತ್ತಿರುವದು ಹೆಮ್ಮೆ ಎನಿಸುತ್ತದೆ. ಉತ್ತರ ಕರ್ನಾಟಕದ ಉದಯೋನ್ಮುಖ ಕಲಾವಿದರಿಗೆ ಚಿತ್ರರಂಗದಲ್ಲಿ ದೊಡ್ಡ ಅವಕಾಶಗಳು ಸಿಗಬೇಕಾದರೆ 'ಹುಲಿಬೀರ' ಸಿನಿಮಾ ದೊಡ್ಡ ಮಟ್ಟದಲ್ಲಿ ಗೆಲ್ಲಬೇಕು. ಕನ್ನಡಿಗರು ಚಿತ್ರಮಂದಿರಕ್ಕೆ ಬಂದು ಬೆಂಬಲಿಸಬೇಕು" ಎಂದು ಮನವಿ ಮಾಡಿದರು.

ಸಿದ್ದಪ್ಪಜ್ಜನ ಮೊಮ್ಮಗಳಾಗಿ ನುಲಿಯುತ್ತ ಬುತ್ತಿ ತೆಗೆದುಕೊಂಡು ಹೊಲಕ್ಕೆ ಹೋಗುವ ಪಾತ್ರದಲ್ಲಿನಾಯಕಿ ನಟಿ ವನು ಪಾಟೀಲ್ ಪ್ರೇಕ್ಷಕ–ರಿಂದ ಸಿಳ್ಳೆ ಗಿಟ್ಟಿಸಿದ್ದಾರೆ. ಮಾಧ್ಯಮದವರ ಜೊತೆ ಮಾತನಾಡುತ್ತ ಸಿನಿಮಾ ಬಿಡುಗಡೆಯಾಗಿದ್ದು ಎಲ್ಲರೂ ಚಿತ್ರಮಂದಿರಗಳಿಗೆ ಆಗಮಿಸಿ ಸಿನಿಮಾ ವೀಕ್ಷಿಸಿ ವಿನಂತಿಸಿದರು.

ಚಿತ್ರದ ಪ್ರಮುಖ ಪಾತ್ರಧಾರಿ ವಿಭಿನ್ನ ನೃತ್ಯ ಶೈಲಿ ಮೂಲಕ ಪ್ರೇಕ್ಷಕರ ಮನ ಸೆಳೆದಿರುವ ಸಂತೋಷ ಕೇರಿ ಮಾತನಾಡಿ, "ನಾವು ಶೂಟಿಂಗ್ ವೇಳೆ ಒಂದು ಕುಟುಂಬದಂತೆ ಶ್ರಮಿಸಿ ಈ ಸಿನಿಮಾ ನಿರ್ಮಿಸಿದ್ದೇವೆ. ಇಂದು ರಾಜ್ಯಾಂತ ಪ್ರೇಕ್ಷಕರು 'ಜೈ ಹೋ ಹುಲಿಬೀರ್' ಎಂದು ಕೊಂಡಾಡುತ್ತಿರುವುದು ನಮಗೆ ಅತ್ಯಂತ ಸಂತಸ ತಂದಿದೆ" ಎಂದರು.

ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡದ ಪ್ರಮುಖರು ಹಾಗೂ ಸ್ಥಳೀಯ ಗಣ್ಯರು ಉಪಸ್ಥಿತರಿದ್ದರು.



## ನಿಧನ

### ಶತಾಯುಷಿ ಸಂಗಮ್ಮ ಬಸಪ್ಪ ಗಡಿಗಿ



**ರೋಣ:** ಪಟ್ಟಣದ ಸಂತೆ ಬಜಾರ್ ನಿವಾಸಿ, ಶತಾಯುಷಿ ಸಂಗಮ್ಮ ಬಸಪ್ಪ ಗಡಿಗಿ (103) ಶನಿವಾರ ನಿಧನರಾದರು. ಅವರಿಗೆ ಇಬ್ಬರು ಪುತ್ರರು, 8 ಜನ ಪುತ್ರಿಯರು ಹಾಗೂ ಅಪಾರ ಬಂಧು–ಬಳಗ ಇದ್ದಾರೆ.

**ಸಂತಾಪ:** ಹಿರಿಯ ಜೀವಿ ಸಂಗಮ್ಮ ಗಡಿಗಿ ಅವರ ನಿಧನಕ್ಕೆ ವಿಧಾನಸಭೆ ಅಧ್ಯಕ್ಷ ಜಿ.ಎಸ್. ಪಾಟೀಲ, ಮಿಥುನ್ ಪಾಟೀಲ, ಅಕ್ಷಯ್ ಪಾಟೀಲ, ವೀರಯ್ಯ ಸೋಮನಕಟ್ಟಿ ಸೇರಿ ಪಟ್ಟಣದ ಗಣ್ಯ ವ್ಯಾಪಾರಸ್ಥರು ಸಂತಾಪ ಸೂಚಿಸಿದ್ದಾರೆ.

# ಅನ್ನಭಾಗ್ಯಕ್ಕೆ ಕನ್ನ: ಪಡಿತರ ಅಕ್ಕಿ ವಶಪಡಿಸಿಕೊಂಡ ಅಧಿಕಾರಿಗಳು

**ಸತ್ಯಮಿಥ್ಯ ಸುದ್ದಿಮೂಲ ಮುಂಡರಗಿ:**
ಅನ್ನಭಾಗ್ಯಯೋಜನೆಯ ಅಡಿ ವಿತರಿಸುವ ಪಡಿತರ ಅಕ್ಕಿಮೂಟೆಗಳು ಪಟ್ಟಣದ ಜಗದ್ಗುರು ತೋಂಟದಾರ್ಯ ಕೋಟೆ ಪ್ರೌಢಶಾಲೆಯ ಬಳಿ ಸಂಜೆ ಪತ್ತೆಯಾಗಿದ್ದು, ಪೊಲೀಸರು ಅಕ್ಕಿಮೂಟೆಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಒಟ್ಟು 59,400 ರೂ ಮೌಲ್ಯದ ತಲಾ 50 ಕೆ.ಜಿಯ ಒಟ್ಟು 24 ಅಕ್ಕಿ ಮೂಟೆಗಳು ಪತ್ತೆಯಾಗಿದ್ದು, ಅವುಗಳನ್ನು ಯಾರು ಸಂಗ್ರಹಿಸಿದ್ದಾರೆ, ಪಟ್ಟಣದ ಹೊರವಲಯದಲ್ಲಿ ಏಕೆ ಇಟ್ಟಿದ್ದಾರೆ ಎನ್ನುವುದು ನಿಗೂಢವಾಗಿದೆ.

ಕನ್ನಡಜಾಗೃತಿವೇದಿಕೆಯರಾಜ್ಯಘಟಕದಅಧ್ಯಕ್ಷಗಣೇಶಹಾತಲಗೇರಿ ಅವರು ಮೊದಲು ತಾಲ್ಲೂಕು ಆಹಾರ ನಿರೀಕ್ಷಕ ಚನ್ನಪ್ಪ ಚನ್ನಪ್ಪಗೌಡರ ಅವರ ಗಮನಕ್ಕೆ ತಂದಿದ್ದಾರೆ. ನಂತರ ಪೊಲೀಸರೊಂದಿಗೆ ಸ್ಥಳಕ್ಕೆ ಬಂದ ಆಹಾರ ನಿರೀಕ್ಷಕರು ಅಕ್ಕಿಮೂಟೆಗಳನ್ನು ಪರಿಶೀಲಿಸಿ, ಅಕ್ಕಿಯು ಅನ್ನಭಾಗ್ಯ ಯೋಜನೆಯ ಪಡಿತರ ವಿತರಣೆಯ ಅಕ್ಕಿ ಎಂದು ಖಚಿತಪಡಿಸಿದ್ದಾರೆ. ನಂತರ ಈ ಕುರಿತು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಪೊಲೀಸರು ತನಿಖೆ ಕೈಗೊಂಡಿದ್ದಾರೆ.



# ಹಿಂದೂ ಮಹಾಗಣಪತಿ ಮಹಾಪ್ರಸಾದಕ್ಕೆ ಸಾವಿರಾರು ಭಕ್ತರು

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ನಗರದ ಹಿರೇಅಗಸಿ ಮುಂಭಾಗದ ಶ್ರೀ ಗಜೇಂದ್ರ ಯುವಕ ಮಂಡಳದ ಆಶ್ರಯದಲ್ಲಿ ಪ್ರತಿಷ್ಠಾಪಿಸಲಾಗಿರುವ ಹಿಂದೂ ಮಹಾಗಣಪತಿ ಮೂರ್ತಿಯ ಮಹಾಪ್ರಸಾದ ಅನ್ನಸಂತರ್ಪಣೆ ಕಾರ್ಯಕ್ರಮವು ಶನಿವಾರ ಭಕ್ತಿಭಾವದಿಂದ ನಡೆಯಿತು.

ನಗರದ ಬಜರಂಗದಳ ವೃತ್ತದಲ್ಲಿ ಆಯೋಜಿಸಿದ್ದ ಮಹಾ ಅನ್ನಸಂತರ್ಪಣೆಗೆ ಮಧ್ಯಾಹ್ನ 1 ಗಂಟೆಯಿಂದಲೇ ಸಾವಿರಾರು ಭಕ್ತರು ಆಗಮಿಸಿದರು. ಸರತಿ ಸಾಲಿನಲ್ಲಿ ಪ್ರಸಾದ ಸ್ವೀಕರಿಸಿದ ಭಕ್ತರು ಶ್ರೀ ಗಣೇಶನ ದರ್ಶನ ಪಡೆದು, ಪ್ರಸಾದ ಸ್ವೀಕರಿಸಿದರು. ನಗರ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದಲೂ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರಿಂದ ಕಾರ್ಯಕ್ರಮ ಸ್ಥಳದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಪ್ರಸಾದ ವಿತರಣೆ, ಕುಡಿಯುವ ನೀರು ಸೇರಿದಂತೆ ಅಗತ್ಯ ವ್ಯವಸ್ಥೆಗಳನ್ನು ಯುವಕ ಮಂಡಳದ ಸದಸ್ಯರು ಹಾಗೂ ಕಾರ್ಯಕರ್ತರು ಅಚ್ಚುಕಟ್ಟಾಗಿ ನಿರ್ವಹಿಸಿದರು.

ಶ್ರೀ ಗಜೇಂದ್ರ ಯುವಕ ಮಂಡಳದ ಸದಸ್ಯರು, ಕಾರ್ಯಕರ್ತರು ಹಾಗೂ ಸಾರ್ವಜನಿಕರ ಸಹಕಾರದಿಂದ ಅನ್ನಸಂತರ್ಪಣೆ ಯಶಸ್ವಿಯಾಗಿ ನಡೆಯಿತು. ಮಹಾಪ್ರಸಾದ ಸ್ವೀಕರಿಸಲು ಆಗಮಿಸಿದ್ದ ಭಕ್ತರಲ್ಲಿ ಭಕ್ತಿ ಹಾಗೂ ಸಂತಸ ಮನೆ ಮಾಡಿತ್ತು.

ಇನ್ನೂ ಇದೇ ಸಂದರ್ಭದಲ್ಲಿ ಆನಂದ ಮಂತ್ರಿ,ಕೃಷ್ಣಾ ಮಂತ್ರಿ, ರವೀಂದ್ರ ಶಿಂಗ್ರಿ,ಸಂಜೀವ ಜೋಷಿ, ಸಂತೋಷ ವಸ್ರದ, ರವಿ ಕಲಾಲ, ಅನುರಾಗ ಚಿನಿವಾಲರ,ವಿಶ್ವನಾಥ ಕುಷ್ಟಗಿ,ಕಿರಣ ಕಮ್ಮಾರ, ಪ್ರಸಾದ ಬಡಿಗೇರ,ಶ್ರೀನಿವಾಶಕಾಮಾರಸೇರಿದಂತೆ ಅನೇಕರು ಇದ್ದರು.



**"ಫ್ಯಾಶಿಸ್ಟ್ ಶಕ್ತಿಗಳ ದಬ್ಬಾಳಿಕೆಯ ವಿರುದ್ಧ ರಾಜ್ಯ ಮಟ್ಟದ ಪ್ರತಿರೋಧ ಸಮಾವೇಶ, ರ್‍ಯಾಲಿ"**

# ಇಂದು ಧಾರವಾಡ ಚಲೋ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ದೇಶದ ಬಹುತ್ವ, ಸಂವಿಧಾನ, ಅಭಿವ್ಯಕ್ತಿ ಸ್ವಾತಂತ್ರ್ಯ ಹಾಗೂ ಸಾಂಸ್ಕೃತಿಕ ಪರಂಪರೆಯ ಮೇಲೆನಡೆಯುತ್ತಿರುವ ನಿರಂತರ ದಾಳಿಗಳನ್ನು ಖಂಡಿಸಿ, ವಿದ್ಯಾರ್ಥಿ–ಯುವಜನ ಮತ್ತು ಜನಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಅಕ್ಟೋಬರ್ 4ರಂದು 'ಧಾರವಾಡ ಚಲೋ' ರಾಜ್ಯ ಮಟ್ಟದ ಪ್ರತಿರೋಧ ಸಮಾವೇಶ ಹಾಗೂ ರ್‍ಯಾಲಿಯನ್ನು ಹಮ್ಮಿಕೊಳ್ಳಲಾಗಿದೆ.



ಸಂಘ ಪರಿವಾರದ ಶಕ್ತಿಗಳು ಕಳೆದ 30 ವರ್ಷಗಳಿಂದ ದೇಶದ ಬಹುತ್ವ ಮತ್ತು ಸಾಂಸ್ಕೃತಿಕ ಕ್ಷೇತ್ರದ ಮೇಲೆ ವ್ಯವಸ್ಥಿತ ದಾಳಿ ನಡೆಸುತ್ತಿವೆ. ವಿಚಾರವಾದಿಗಳ ತೇಜೋವಧೆ, ಶಿಕ್ಷಣ ಮತ್ತು ಪಠ್ಯಪುಸ್ತಕಗಳ ಭಗವದ್ಗೀಕರಣ/ತಿರುಚುವಿಕೆ, ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ಮೇಲಿನ ದಬ್ಬಾಳಿಕೆ, ಆಹಾರ ಮತ್ತು ಉಡುಪಿನ ಸ್ವಾತಂತ್ರ್ಯದ ಮೇಲಿನ ಗದಾಪ್ರಹಾರ ಹಾಗೂ ಇತ್ತೀಚೆಗೆ 'ಸಮುದಾಯ' ಸಾಂಸ್ಕೃತಿಕ ಕಾರ್ಯಕ್ರಮದ ಮೇಲೆ ನಡೆದ ಹಲ್ಲೆಗಳು ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕವಾಗಿವೆ.

ಬುದ್ಧ, ಬಸವ, ಅಂಬೇಡ್ಕರ್, ಕುವೆಂಪು ಅವರ ಆಶಯಗಳಂತೆ ವೈಚಾರಿಕತೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯಲು ಈ ಸಾಂಸ್ಕೃತಿಕ ಪ್ರತಿರೋಧ ಸಮಾವೇಶವನ್ನು ಆಯೋಜಿಸಲಾಗಿದೆ. ಈ ಐತಿಹಾಸಿಕ 'ಧಾರವಾಡ ಚಲೋ' ಕಾರ್ಯಕ್ರಮದಲ್ಲಿ ಗದಗ ಜಿಲ್ಲೆಯಿಂದ ನೂರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು, ಯುವಜನರು ಹಾಗೂ ಪ್ರಗತಿಪರ ಚಿಂತಕರು ಭಾಗವಹಿಸಲಿದ್ದಾರೆ ಎಂದು ಎಸ್ ಎಫ್ ಐ ಜಿಲ್ಲಾಧ್ಯಕ್ಷ ಚಂದ್ರು ರಾಠೋಡ್ ಪತ್ರಿಕಾ ಪ್ರಕಟಣೆ ಹೊರಡಿಸಿದ್ದಾರೆ.

# ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ ಪರಿಣಾಮಕಾರಿ ಅನುಷ್ಠಾನಕ್ಕೆ ಕ್ರಮವಹಿಸಿ: ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

**ಸತ್ಯಮಿಥ್ಯ ಸುದ್ದಿಮೂಲ ಗದಗ :**
ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ಸೌಲಭ್ಯ ಜಿಲ್ಲೆಯ ಅರ್ಹ ರೈತರಿಗೆ ಸಮರ್ಪಕವಾಗಿ ತಲುಪಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ 2026–27ನೇ ಸಾಲಿನ ಅನುಷ್ಠಾನ ಹಾಗೂ ಪ್ರಗತಿ ಕುರಿತು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ಪರಿಶೀಲನಾ ಸಭೆ ಜರುಗಿತು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಮಾತನಾಡಿ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯು ಅರ್ಹ ರೈತ ಕುಟುಂಬಗಳಿಗೆ ಆರ್ಥಿಕ ನೆರವು ಒದಗಿಸುವ ಪ್ರಮುಖ ಕೇಂದ್ರ ಸರ್ಕಾರದ ಯೋಜನೆಯಾಗಿದೆ. ಅರ್ಹ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯಗಳು ಯಾವುದೇ ವಿಳಂಬವಿಲ್ಲದೆ ತಲುಪುವಂತೆ ಸಂಬಂಧಿಸಿದ ಅಧಿಕಾರಿಗಳು ಕ್ರಮವಹಿಸಬೇಕು. ರೈತರ ಆಧಾರ್, ಬ್ಯಾಂಕ್ ಖಾತೆ ಹಾಗೂ ಇತರ ಅಗತ್ಯ ದಾಖಲೆಗಳಲ್ಲಿನ ಮಾಹಿತಿಯು ಸರಿಯಾಗಿರುವಂತೆ ನೋಡಿಕೊಳ್ಳಬೇಕು. ಅರ್ಹ ರೈತರು ಯೋಜನೆಯ ಸೌಲಭ್ಯದಿಂದ ವಂಚಿತರಾಗದಂತೆ ಜಾಗೃತಿ ಮೂಡಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ರೈತರಿಗೆ ಯೋಜನೆಯ ಕುರಿತು ಯಾವುದೇ ಗೊಂದಲ ಅಥವಾ ಸಮಸ್ಯೆ ಎದುರಾದಲ್ಲಿ ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಮಾಹಿತಿ ನೀಡಿ ಸಮಸ್ಯೆ ಪರಿಹರಿಸಬೇಕು. ಫಲಾನುಭವಿಗಳ ಅರ್ಹತೆ, ದಾಖಲೆಗಳ ಪರಿಶೀಲನೆ ಹಾಗೂ ಯೋಜನೆಯ ಪ್ರಗತಿಯನ್ನು ನಿಯಮಿತವಾಗಿ ಪರಿಶೀಲಿಸುವ ಮೂಲಕ ಅನುಷ್ಠಾನದಲ್ಲಿ ಪಾರದರ್ಶಕತೆ ಕಾಪಾಡಬೇಕು. ಕೃಷಿ ಇಲಾಖೆ ಸೇರಿದಂತೆ ಸಂಬಂಧಿಸಿದ ವಿವಿಧ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸುವ ಮೂಲಕ ಯೋಜನೆಯ ಉದ್ದೇಶ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾದಿಕಾರಿಗಳು ತಿಳಿಸಿದರು.



ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಚೇತನಾ ಪಾಟೀಲ ಅವರು ಮಾತನಾಡಿ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ಉದ್ದೇಶ, ಜಿಲ್ಲೆಯಲ್ಲಿನ ಯೋಜನೆಯ ಅನುಷ್ಠಾನ, ರೈತರ ನೋಂದಣಿ, ಫಲಾನುಭವಿಗಳ ವಿವರಗಳ ಪರಿಶೀಲನೆ ಹಾಗೂ ಯೋಜನೆಯಡಿ ರೈತರಿಗೆ ದೊರೆಯುತ್ತಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಪ್ರಧಾನಮಂತ್ರಿ ಧನ್ ಧಾನ್ಯ ಕೃಷಿ ಯೋಜನೆ, ಹಿಂಗಾರು ಹಂಗಾಮಿನ ಬೀಜ ವಿತರಣೆ ಕಾರ್ಯಕ್ರಮ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಗದಗ ಮತ್ತು ರೋಣ ತಾಲೂಕಿನ ಉಪ ಕೃಷಿ ನಿರ್ದೇಶಕರು, ಎಲ್ಲ ತಾಲೂಕಿನ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರು ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಸತ್ಯಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ
SATY MITHI
Kannada Daily Morning

# ಮನೆಗೊಂದು ಗ್ರಂಥಾಲಯ ಅನುಷ್ಠಾನ: ಮಕ್ಕಳ ಕಾರ್ಯ ಮೆಚ್ಚುಗೆ – ಮರಿಶಾಂತವೀರ ಶ್ರೀ ಬಣ್ಣನೆ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ:**
ನಗರದ ಶ್ರೀ ಗವಿಮಠದ ಆವರಣದಲ್ಲಿ 'ಶಾಲಾ ಮಕ್ಕಳ ಮನೆಗೊಂದು ಗ್ರಂಥಾಲಯ ಅನುಷ್ಠಾನ' ಸಮಾರಂಭ ನಡೆಯಿತು.

ಗವಿಮಠ ಸಂಸ್ಥಾನದ ಕಡಲಬಾಳು ಶಾಖಾ ಮಠದ ಶ್ರೀ ಮರಿಶಾಂತವೀರ ಮಹಾಸ್ವಾಮಿಗಳು ಕಾರ್ಯಕ್ರಮವನ್ನು ಉದ್ಘಾಟಿಸಿ, "ದೊಡ್ಡವರು ಊರಿಗೊಂದು ಗುಡಿ ಕಟ್ಟಿದ–ರೆ, ಮಕ್ಕಳು ಮನೆಗೊಂದು ಗ್ರಂಥಾಲಯ ಮಾಡುವ ಮೂಲಕ ಜ್ಞಾನದ ಗುಡಿ ಕಟ್ಟಿದ್ದಾರೆ" ಎಂದು ಮುಂಡರಗಿ ತಾಲೂಕಿನ ಹೆಸರೂರು ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳ ಕಾರ್ಯವನ್ನು ಮೆಚ್ಚಿದರು.

ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಮಾನಸ ಅವರು ಮಾತನಾಡಿ, ಇಡೀ ರಾಜ್ಯಾದ್ಯಂತ ಸುಮಾರು 1 ಲಕ್ಷ ಮನೆಗಳಲ್ಲಿ ಗ್ರಂಥಾಲಯ ಸ್ಥಾಪಿಸುವ ಗುರಿ ಹೊಂದಲಾಗಿದೆ. ಮಕ್ಕಳಿಗೆ ಬಲವಂತವಾಗಿ ಮೊಬೈಲ್ ಬಿಡಿ ಎಂದು ಹೇಳುವ ಬದಲು ಪುಸ್ತಕ ಓದುವ ಹವ್ಯಾಸ ಬೆಳೆಸಬೇಕು ಎಂದರು.

ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾದ ಡಾ. ಜೀವನಸಾಬ ಬಿನ್ನಾಳ ಅವರು ವಿಶೇಷ ಉಪನ್ಯಾಸ ನೀಡಿ, ಪುಸ್ತಕ ಖರೀದಿಸುವುದು ಬದುಕಿಗೆ ಮಾಡುವ ಅತ್ಯುತ್ತಮ ಹೂಡಿಕೆ ಹಾಗೂ ಬಾಬಾಸಾಹೇಬ್ ಅಂಬೇಡ್ಕರ್ ಅವರ ಓದಿನ ಸಂದೇಶವನ್ನು ಸ್ಮರಿಸಿದರು.

ಜಾಗೃತ ಸಮಿತಿ ಸಂಚಾಲಕ ಎ.ಎಸ್. ಮಕಾನದಾರ ಅವರು, ಹೆಸರೂರು ಶಾಲೆಯ ಮಕ್ಕಳು ತಮ್ಮ ಪಾಕೆಟ್ ಮನಿ ಹಾಗೂ ದುಡಿಮೆಯ ಹಣದಿಂದ ಪುಸ್ತಕ ಖರೀದಿಸಿ ಗ್ರಂಥಾಲಯ ನಿರ್ಮಿಸಿಕೊಂಡಿರುವುದು ಇಡೀ ನಾಡಿಗೆ ಮಾದರಿ ಎಂದರು. ಕಾರ್ಯಕ್ರಮದ ನಂತರ ಕೈಯಲ್ಲಿ ಪುಸ್ತಕ ಹಿಡಿದು ಮಠದ ಆವರಣದಲ್ಲಿ ಸಂಚರಿಸಿದ ಮಕ್ಕಳಿಗೆ ಹಾಗೂ ಗವಿಮಠದ ಶ್ರೀಗಳನ್ನು ಭೇಟಿಯಾಗಿ ಆಶೀರ್ವಾದ ಪಡೆದ ವಿದ್ಯಾರ್ಥಿಗಳಿಗೆ ಅಭಿನಂದನಾ ಪ್ರಮಾಣಪತ್ರ ವಿತರಿಸಲಾಯಿತು.

ಈ ಸಮಾರಂಭವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ ಗದಗ, ಕೊಪ್ಪಳ ಗವಿಮಠ ಹಾಗೂ ಹೆಸರೂರು ಸರ್ಕಾರಿ ಪ್ರೌಢಶಾಲೆಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿತ್ತು.



# ಮಳೆ ಕೊರತೆ, ಮೆಣಸಿನಕಾಯಿ ಬೆಳೆ ಕಿತ್ತು ಹಾಕಿದ ಅನ್ನದಾತ

**ರೋಣ:** ಮಳೆ ಕೊರತೆ ಹಾಗೂ ಬಿಸಿಲಿನ ತಾಪ ಹೆಚ್ಚಾದ ಹಿನ್ನೆಲೆಯಲ್ಲಿ ಬಿತ್ತನೆ ಮಾಡಿದ್ದ ಮೆಣಸಿನಕಾಯಿ ಬೆಳೆಯನ್ನು ರೈತರು ಬುಡಸಮೇತ ಕಿತ್ತು ಹಾಕುತ್ತಿದ್ದಾರೆ.

ತಾಲೂಕಿನ ಯಾ,ಸ. ಹಡಗಲಿ ಗ್ರಾಮದ ರೈತರಾದ ಅಶೋಕ ವಾಸನದ ಹಾಗೂ ಸಿದ್ದು ಕೆಂಪಸಿ ಎಂಬುವವರು ನಾಲ್ಕುಎಕರೆಜಮೀನಿನಲ್ಲಿ ಬಿತ್ತನೆ ಮಾಡಿದ್ದ ಕೆಂಪು ಮೆಣಸಿನಕಾಯಿ ಬೆಳೆಯನ್ನು ಕಿತ್ತು ಹಾಕಿದ್ದಾರೆ. ಬೆಣ್ಣೆ ಹಳ್ಳದ ಅಚ್ಚುಕಟ್ಟು ಪ್ರದೇಶ ಹಾಗೂ ಕೃಷಿ ಹೊಂಡ ನಿರ್ಮಿಸಿಕೊಂಡವರ ಬೆಳೆಗಳುಉತ್ತಮವಾಗಿವೆ. ಆದರೆ, ಮಳೆಯನ್ನೇ ನಂಬಿ ಬಿತ್ತನೆ ಮಾಡಿದ್ದ ರೈತರು ಆಕಾಶದತ್ತ ಮುಖ ಮಾಡಿದ್ದಾರೆ. ಸಾಲ ಮಾಡಿ ಬಿತ್ತನೆ ಮಾಡಿ ಗೊಬ್ಬರ ಹಾಕಿದ್ದ ರೈತರಿಗೆ ಈಗ ಖರ್ಚು ಹೆಗಲೇರಿದೆ.



ಮಳೆಯನ್ನೇ ನಂಬಿ ಮೆಣಸಿನಕಾಯಿ ಬಿತ್ತನೆ ಮಾಡಿದ್ದೇವು. ಬಿತ್ತನೆ ಸಮಯದಲ್ಲಿ ಸುರಿದ ಮಳೆ ಮತ್ತೆ ಬರಲೇ ಇಲ್ಲ. ಸಾಲ ಮಾಡಿ ಬೀಜ, ಗೊಬ್ಬರ ಹಾಗೂ ಟ್ರ್ಯಾಕ್ಟರ್ ಬಾಡಿಗೆ ಖರ್ಚು ಭರಿಸಲು ಸಾಧ್ಯವಾಗುತ್ತಿಲ್ಲ. ಸರ್ಕಾರ ರೈತರ ನೆರವಿಗೆ ಬರಬೇಕು.
। ರಾಜುಗೌಡ ಪಾಟೀಲ, ಯಾ.ಸ. ಹಡಗಲಿ ಗ್ರಾಮಸ್ಥ

# ಇಲಾಖೆವಾರು ಅರ್ಜಿಗಳ ವರ್ಗೀಕರಣ ಮಾಡಿ, ಸಮಸ್ಯೆ ಪರಿಹರಿಸಿ: ಕೆ.ಪಿ. ಮೋಹನ್‌ರಾಜ್

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ:**
ಪ್ರಜಾಸೇವಾ ಆಂದೋಲನ ಸಭೆಯಲ್ಲಿ ಸ್ವೀಕೃತವಾದ ಅರ್ಜಿಗಳನ್ನು ಇಲಾಖೆವಾರು ವರ್ಗೀಕರಣ ಮಾಡಿ, ಸಮಸ್ಯೆಯನ್ನು ಪರಿಹರಿಸಿ ಎಂದು ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಕೆ.ಪಿ ಮೋಹನ್‌ರಾಜ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಶನಿವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಇದುವರೆಗಿನ ಪ್ರಜಾಸೇವಾ ಆಂದೋಲನ ಸಭೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅರ್ಜಿದಾರರಿಗೆ ತಮ್ಮ ಅರ್ಜಿಯಲ್ಲಿನ ವಿಷಯಕ್ಕೆ ಸಂಬಂಧಿಸಿದಂತೆ ಯಾವ ಇಲಾಖೆಗೆ ಅರ್ಜಿ ನೀಡಬೇಕು ಎಂಬ ಕುರಿತು ಕೆಲವೊಮ್ಮೆ ಮಾಹಿತಿ ಇರುವುದಿಲ್ಲ. ಆದ್ದರಿಂದ ಅರ್ಜಿ ಸ್ವೀಕರಿಸಿದ ನಂತರ ಅರ್ಜಿಗಳಲ್ಲಿನ ವಿಷಯಕ್ಕೆ ಸಂಬಂಧಿಸಿದಂತೆ ಇಲಾಖೆವಾರು ಅರ್ಜಿಗಳನ್ನು ವಿಂಗಡನೆ ಮಾಡಿ, ಅರ್ಜಿದಾರರು ಯಾವ ಇಲಾಖೆಗೆ ಸಂಪರ್ಕಿಸಬೇಕು ಎಂಬ ಕುರಿತು ಮಾಹಿತಿ ನೀಡಿ. ಕಾನೂನು ವ್ಯಾಪ್ತಿಯ ಒಳಗೆ ಬರುವ ಯಾವುದೇ ಅರ್ಜಿಯನ್ನು ಕೂಡಲೇ ವಿಲೇವಾರಿ ಮಾಡಿ, ಅರ್ಜಿದಾರರ ಸಮಸ್ಯೆಗಳನ್ನು ಪರಿಹರಿಸಿ ಎಂದು ಅವರು ಅಧಿಕಾರಿಗಳಿಗೆ ತಿಳಿಸಿದರು. ಅಧಿಕಾರಿಗಳು ಅರ್ಜಿಯನ್ನು ಕೂಲಂಕಷವಾಗಿ ಪರಿಶೀಲಿಸಿ. ಅರ್ಜಿಯಲ್ಲಿನ ವಿಷಯಕ್ಕೆ ಸಂಬಂಧಿಸಿದಂತೆ ನಿಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲ ಸಾಧ್ಯತೆಗಳನ್ನು ಪೂರೈಸಿ, ಅರ್ಜಿ ವಿಲೇವಾರಿ ಮಾಡಿ. ಕೆಲ ಸಂದರ್ಭಗಳಲ್ಲಿ ಮಾನವೀಯ ದೃಷ್ಠಿಯಿಂದಲೂ ಅಧಿಕಾರಿಗಳು ವರ್ತಿಸಬೇಕು. ಅರ್ಜಿದಾರರಿಗೆ ಅರ್ಜಿ ವಿಲೇಯಾದ ಬಗ್ಗೆ ಮಾಹಿತಿ ನೀಡಬೇಕು ಎಂದ ಅವರು ವಿವಿಧ ಇಲಾಖೆಗಳ ಅರ್ಜಿಗಳ ನಿಯಮಾನುಸಾರ ವಿಲೇವಾರಿ ಕುರಿತು ಸಭೆಯಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಾಹಿಲ್ ಬಾಗ್ಲಾ, ಡಿಸಿಎಫ್ ನಿರ್ಮಲಾ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಟಿ. ಕೃಷ್ಣಮೂರ್ತಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



# ಹಾಸನಾಂಬೆ ದರ್ಶನಕ್ಕೆ ಡಿಜಿಟಲ್ ಸ್ಪರ್ಶ

**ಹಾಸನ:** ಹಾಸನಾಂಬ ಜಾತ್ರಾ ಮಹೋತ್ಸವಕ್ಕೆ ರಾಜ್ಯ ಹಾಗೂ ಹೊರರಾಜ್ಯಗಳಿಂದ 30 ಲಕ್ಷಕ್ಕೂ ಅಧಿಕ ಭಕ್ತರು ಆಗಮಿಸುವ ನಿರೀಕ್ಷೆ ಹಿನ್ನೆಲೆಯಲ್ಲಿ ಸುಗಮ ದರ್ಶನಕ್ಕಾಗಿ ಡಿಜಿಟಲ್ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶ್ರೀ ಹಾಸನಾಂಬ ದೇವಿಯ ದರ್ಶನ ಹಾಗೂ ಶ್ರೀ ಸಿದ್ಧೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಸಂಬಂಧ ಆಯೋಜಿಸಿದ್ದ ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, "ಜಾತ್ರೆ ನಿರ್ವಹಣೆಯಲ್ಲಿ ಆನ್‌ಲೈನ್ ಟಿಕೆಟ್ ಬುಕ್ಕಿಂಗ್, ವಾಟ್ಸ್ ಆಪ್ ಚಾಟ್ ಜಿಪಿಟಿ, ದೇವಾಲಯದ ವೆಬ್‌ಸೈಟ್, ಜಿಯೋಟ್ಯಾಗಿಂಗ್, ಎಐ ಆಧಾರಿತ ಕ್ಯಾಮೆರಾಗಳು ಹಾಗೂ ಪ್ರಮುಖ ಸ್ಥಳಗಳಲ್ಲಿ ಸಿಸಿ ಟಿವಿ ವ್ಯವಸ್ಥೆ ಮೂಲಕ ಭಕ್ತರ ಸಂಚಾರ ಮತ್ತು ಜನದಟ್ಟಣೆ ಮಾಹಿತಿಯನ್ನು ಸಂಗ್ರಹಿಸಿ ಅಗತ್ಯ ಕ್ರಮ ವಹಿಸಲು ಅನುಕೂಲವಾಗುವಂತೆ ಕೇಂದ್ರಿಕೃತ ನಿಯಂತ್ರಣ ಕೊಠಡಿ ಆರಂಭಿಸಬೇಕು" ಎಂದು ತಿಳಿಸಿದರು. " ಅ. 29ರಿಂದ ನ.11ರವರೆಗೆ ನಡೆಯಲಿರುವ ಜಾತ್ರೆಯ ಪ್ರಮುಖ ಕೇಂದ್ರಗಳಾದ ದೇವಾಲಯ, ದರ್ಶನ ಸರತಿ ಸಾಲುಗಳು, ಪ್ರವೇಶ ಮತ್ತು ನಿರ್ಗಮನ ಮಾರ್ಗಗಳು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಪ್ರದೇಶಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ಹಾಗೂ ಸ್ವಚ್ಛತೆ ಕಾಪಾಡಬೇಕು. ಆರೋಗ್ಯ ಮತ್ತು ತುರ್ತು ಸೇವೆಗಳಿಗೆ ಆದ್ಯತೆ ನೀಡಿ ಸರತಿ ಸಾಲುಗಳ ನಿರ್ವಹಣೆಗೆ ಬ್ಯಾರಿಕೇಡಿಂಗ್ ಹಾಗೂ ಜರ್ಮನ್ ಟೆಂಟ್ ವ್ಯವಸ್ಥೆಯನ್ನು ವಿಸ್ತರಿಸುವುದರೊಂದಿಗೆ ಜನದಟ್ಟಣೆಯನ್ನು ನಿರಂತರವಾಗಿ ಗಮನಿಸಲು ತಾಂತ್ರಿಕ ತಂಡಗಳು ಮತ್ತು ಡ್ರೋನ್ ಮೇಲ್ವಿಚಾರಣೆಯ ವ್ಯವಸ್ಥೆಗೆ ಕ್ರಮವಹಿಸಬೇಕು" ಎಂದು ಸೂಚಿಸಿದರು.



### ಸಭೆಯ ಪ್ರಮುಖ ಅಂಶಗಳು

- ಅ.29ರಿಂದ ನ.11ರವರೆಗೆ ಹಾಸನಾಂಬ ಉತ್ಸವ
- ಭಕ್ತರ ದಟ್ಟಣೆಗೆ ಬ್ರೇಕ್
- ಜಾತ್ರೆಗೆ ಜಿಯೋ ಟ್ಯಾಗಿಂಗ್ ಅಸ್ತ್ರ
- ಹಾಸನಾಂಬ ಜಾತ್ರೆಗೆ ತಾಂತ್ರಿಕ ಅಸ್ತ್ರ
- ವಾಟ್ಸ್ ಆಪ್‌ನಲ್ಲಿ ದರ್ಶನದ ಮಾಹಿತಿ
- ಶೌಚಾಲಯ ಸ್ವಚ್ಛತೆಗೆ ವಿಶೇಷ ತಂಡ
- ಹಿರಿಯರು, ಗರ್ಭಿಣಿಯರಿಗೆ ಪ್ರತ್ಯೇಕ ದರ್ಶನ ಸಾಲು

**ಪಾರ್ಕಿಂಗ್ ವ್ಯವಸ್ಥೆ:** ಜಾತ್ರಾ ಸಂದರ್ಭದಲ್ಲಿ ನಗರದಲ್ಲಿ ಉಂಟಾಗಬಹುದಾದ ವಾಹನ ದಟ್ಟಣೆ ನಿಯಂತ್ರಿಸಲು ಪತ್ಯೇಕ ಸಂಚಾರ ಮತ್ತು ಪಾರ್ಕಿಂಗ್ ವ್ಯವಸ್ಥೆ, ಪ್ರಮುಖ ರಸ್ತೆಗಳಲ್ಲಿ ನೋ ಪಾರ್ಕಿಂಗ್ ಸೂಚನಾ ಫಲಕಗಳನ್ನು ಅಳವಡಿಸುವುದರ ಜತೆಗೆ, ಪಾರ್ಕಿಂಗ್ ಪ್ರದೇಶಗಳಿಂದ ದೇವಾಲಯದ ಪ್ರಮುಖ ಪ್ರವೇಶ ದ್ವಾರಗಳವರೆಗೆ ಮಿನಿ ಬಸ್ ಶಟಲ್ ಸೇವೆ ಕಲ್ಪಿಸಬೇಕು ಎಂದು ತಾಕೀತು ಮಾಡಿದರು.

**ಹಿರಿಯರು, ಗರ್ಭಿಣಿಯರಿಗೆ ಪ್ರತ್ಯೇಕ ಸಾಲು:** 80 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷ ಚೇತನರು, ಒಂದು ವರ್ಷದೊಳಗಿನ ಶಿಶುವಿನೊಂದಿಗೆ ಬರುವ ತಾಯಂದಿರು, ಗರ್ಭಿಣಿಯರಿಗೆ ಪ್ರತ್ಯೇಕ ಸರತಿ ಸಾಲಿನಲ್ಲಿ ದರ್ಶನ ವ್ಯವಸ್ಥೆ ಕಲ್ಪಿಸಲು ಹಾಗೂ ಸಹಾಯ ಕೇಂದ್ರ, ವೀಲ್‌ಚೇರ್, ಬ್ಯಾಟರಿ ವಾಹನ, ಕಾಯುವ ಸ್ಥಳ ಹಾಗೂ ಅಗತ್ಯ ವೈದ್ಯಕೀಯ ನೆರವು ಒದಗಿಸುವ ವ್ಯವಸ್ಥೆ ಮಾಡಬೇಕು ಎಂದು ನಿರ್ದೇಶನ ನೀಡಿದರು.

**ವೈದ್ಯಕೀಯ ತಂಡ:** ಲಕ್ಷಾಂತರ ಭಕ್ತರ ಆರೋಗ್ಯದ ದೃಷ್ಟಿಯಿಂದ ವೈದ್ಯರು, ಶುಶ್ರೂಷಕರು, ಆಂಬುಲೆನ್ಸ್‌ಗಳು ಹಾಗೂ ತುರ್ತು ವೈದ್ಯಕೀಯ ತಂಡಗಳನ್ನು ಸನ್ನದ್ಧವಾಗಿಡಲು ಕ್ರಮ ಕೈಗೊಳ್ಳಬೇಕು. ಭಕ್ತರಿಗೆ ನಿರಂತರ ಮಾಹಿತಿ ಒದಗಿಸುವ ನಿಟ್ಟಿನಲ್ಲಿ ಹೆಲ್ಪ್ ಡೆಸ್ಕ್, ಸಹಾಯವಾಣಿ ಮತ್ತು ಸಾರ್ವಜನಿಕ ಪ್ರಕಟಣೆ ವ್ಯವಸ್ಥೆಗಳನ್ನು ಪರಿಣಾಮಕಾರಿಯಾಗಿ ಮಾಡಬೇಕು ಎಂದರು.

**ಶೌಚಗೃಹಗಳ ಸ್ವಚ್ಛತೆಗೆ ಆದ್ಯತೆ:** ಬಹುಮುಖ್ಯವಾಗಿ ತಾತ್ಕಾಲಿಕ ಶೌಚಾಲಯಗಳನ್ನು ಅತ್ಯಂತ ಸ್ವಚ್ಛವಾಗಿಡಬೇಕು. ಈ ನಿಟ್ಟಿನಲ್ಲಿ ಪ್ರತಿ ಬಾರಿ ಬಳಸಿದ ತಕ್ಷಣ ಸ್ವಚ್ಛಗೊಳಿಸಬೇಕು. ಕೈ ತೊಳೆಯಲು ಸಿಂಕ್ ಹಾಗೂ ಕಾಲು ತೊಳೆದುಕೊಳ್ಳಲು ಟ್ಯಾಪ್ ವ್ಯವಸ್ಥೆ ಮಾಡಬೇಕು. ನೀರು ಎಲ್ಲಿಯೂ ನಿಲ್ಲದೆ ಸರಾಗವಾಗಿ ಹರಿದು ಹೋಗುವಂತೆ ಸೂಕ್ತ ವ್ಯವಸ್ಥೆ ಮಾಡಬೇಕು. ಸ್ವಚ್ಛತಾ ಕಾರ್ಯದಲ್ಲಿ ತೊಡಗುವ ಸಿಬ್ಬಂದಿಗೆ ತರಬೇತಿ ನೀಡಬೇಕು. ಪ್ರತಿದಿನ ಹಾಜರಾತಿ ಹಾಕಬೇಕು. ಶೌಚಾಲಯ ಸ್ವಚ್ಛತೆಯನ್ನು ಮೇಲ್ವಿಚಾರಣೆ ಮಾಡಲು ತಂಡ ರಚನೆ ಮಾಡಬೇಕು ಎಂದು ಸೂಚನೆ ನೀಡಿದರು.




SATYAMITHI KANNADA DAILY MORNING OWNER, PUBLISHER, BY: CHANNAVEERAPPA NINGAPPA SAMAGANDI PUBLISHED FROM: KELAGAL{ETH, NEAR BASAVESHWAR DEVASTAN, HOME NO. 169, WARD NO, 4 MAIN ROAD GAJEDRAGAD, GADAG KARNATAKA - 582114 PRINTED AT: MAILARALINGESHWAR PRINTERS, WARD NO, 3, SUDI TQ, GAJENDRAGAD, GADAG, KARNATAKA- 582114